ಭಾನುವಾರ,15.02.2026
ಬೆಂಗಳೂರು, ಬೆಲೆ: 5ರೂ,2 ಪುಟಗಳು
ಸಂಪುಟ 01 – ಸಂಚಿಕೆ 143

Digital Varthe Kannada Daily
Volume 01 - Issue 143
Sunday, 15.02.2026
Price: 5/- Rs
2 Pages Bangalore

PRGI/RNI: KNKAN/25/A1348

# ಡಿಜಿಟಲ್ ವಾರ್ತೆ

ಕನ್ನಡಿಗರ ಶಕ್ತಿ

ಕನ್ನಡ ದಿನಪತ್ರಿಕೆ

DIGITAL VARTHE

digitalvarthe@gmail.com
www.digitalvarthe.com

## ತಹಶೀಲ್ದಾರ್ ವಿರುದ್ಧ ಡೆತ್ನೋಟ್ ಬರೆದಿಟ್ಟು ಆತ್ಮಹತ್ಯೆ ಹೈಡ್ರಾಮಾ





**ಚಿಕ್ಕಬಳ್ಳಾಪುರ:** ಜಿಲ್ಲೆಯ ಮಂಚೇ ಹಳ್ಳಿ ತಾಲೂಕಿನ ಗಿಡಗಾನಹಳ್ಳಿ ಗ್ರಾಮದಲ್ಲಿ ಸರ್ಕಾರಿ ಜಮೀನು ಅಕ್ರಮ ನಿರ್ಮಾಣ ವಿಚಾರವಾಗಿ ಉದ್ಭವಿಸಿದ ವಿವಾದ ಹೈಡ್ರಾಮಾಗೆ ಕಾರಣವಾಗಿದೆ. ಸ್ವಂತ ಜಮೀನಿಗೆ ಹೊಂದಿ ಕೊಂಡಿರುವ ಸರ್ಕಾರಿ ಜಾಗದಲ್ಲಿ ಮನೆ ನಿರ್ಮಿಸಲು ಮುಂದಾದ ವ್ಯಕ್ತಿ, ತಹಶೀಲ್ದಾರ್ ತೆರವು ಕಾರ್ಯಾಚರಣೆಗೆ ಮುಂದಾದ ಹಿನ್ನೆಲೆ, ಅವರ ವಿರುದ್ಧ ಡೆತ್‌ನೋಟ್ ಬರೆದಿಟ್ಟು ಅಂಟಿಬಯೋಟಿಕ್ ಮಾತ್ರೆಗಳನ್ನು ಸೇವಿಸಿ ಆತ್ಮಹತ್ಯೆಗೆ ಯತ್ನಿಸಿದ ಘಟನೆ ಬೆಳಕಿಗೆ ಬಂದಿದೆ.

**ಘಟನೆ ಹಿನ್ನಲೆ:** ಗಿಡಗಾನ ಹಳ್ಳಿ ಗ್ರಾಮದ ನಿವಾಸಿ ಜಿ. ರಾಧಾಕೃಷ್ಣ ಆತ್ಮಹತ್ಯೆಗೆ ಯತ್ನಿಸಿದ ವ್ಯಕ್ತಿ. ಅವರು ಪ್ರತಿಷ್ಠಿತ ಖಾಸಗಿ ಕಾಲೇಜಿನಲ್ಲಿ ಉದ್ಯೋಗದಲ್ಲಿದ್ದು, ಅವರ ಪತ್ನಿ ಗ್ರಾಮಪಂಚಾಯ್ತಿಯಲ್ಲಿ ನೌಕರರಾ ಗಿದ್ದಾರೆ. ಕುಟುಂಬವು ಆರ್ಥಿಕ ಹಾಗೂ ಸಾಮಾಜಿಕವಾಗಿ ಸುಸ್ಥಿತಿಯಲ್ಲಿದೆ ಎಂದು ತಿಳಿದುಬಂದಿದೆ.

ರಾಧಾಕೃಷ್ಣ ಅವರಿಗೆ ಹೆದ್ದಾರಿಗೆ ಹೊಂದಿಕೊಂಡಂತೆ ಸ್ವಂತ ಜಮೀನಿದ್ದು, ಅದಕ್ಕೆ ಪಕ್ಕದಲ್ಲೇ ಸರ್ಕಾರಿ ಜಮೀನಿದೆ. ಈ ಸರ್ಕಾರಿ ಜಮೀನಿನಲ್ಲಿ ಮನೆ ನಿರ್ಮಾಣ ಕಾರ್ಯವನ್ನು ಆರಂಭಿಸಲಾಗಿದೆ ಎನ್ನಲಾಗಿದೆ. ಈ ಬಗ್ಗೆ ಮಾಹಿತಿ ದೊರಕಿದ ತಕ್ಷಣ ಮಂಚೇನಹಳ್ಳಿ ತಹಶೀಲ್ದಾರ್ ಪೂರ್ಣಿಮಾ ಅವರು ಸ್ಥಳಕ್ಕೆ ಭೇಟಿ ನೀಡಿ, ನಿರ್ಮಾಣ ಹಂತದಲ್ಲಿದ್ದ ಕಟ್ಟಡವನ್ನು ತೆರವುಗೊಳಿಸಲು ಕ್ರಮ ಕೈಗೊಂಡಿದ್ದಾರೆ.

**ತಹಶೀಲ್ದಾರ್ ವಿರುದ್ಧ ಡೆತ್‌ನೋಟ್:** ತಹಶೀಲ್ದಾರ್ ತೆರವು ಕಾರ್ಯಾಚರಣೆಗೆ ಮುಂದಾದ ನಂತರ ರಾಧಾಕೃಷ್ಣ ಅವರು ಆಕ್ರೋಶಗೊಂಡು, ತಹಶೀಲ್ದಾರ್ ಪೂರ್ಣಿಮಾ ಅವರ ವಿರುದ್ಧವೇ ಡೆತ್‌ನೋಟ್ ಬರೆದಿಟ್ಟು, ಅಂಟಿಬಯೋಟಿಕ್ ಮಾತ್ರೆಗಳನ್ನು ಸೇವಿಸಿ ಆತ್ಮಹತ್ಯೆಗೆ ಯತ್ನಿಸಿದ್ದಾರೆ ಎಂದು ತಿಳಿದುಬಂದಿದೆ. ಈ ಘಟನೆಯಿಂದ ಗ್ರಾಮದಲ್ಲಿ ಕೆಲಕಾಲ ಆತಂಕದ ವಾತಾವರಣ ನಿರ್ಮಾಣವಾಗಿತ್ತು.

**ಸರ್ಕಾರಿ ಜಮೀನು ವಿಚಾರ:** ಗಿಡಗಾನಹಳ್ಳಿ ಹಾಗೂ ಬುದ್ದಿವಂತ ನಹಳ್ಳಿ ಗ್ರಾಮಗಳಲ್ಲಿನ ಕೆಲವು ಸರ್ಕಾರಿ ಜಮೀನುಗಳನ್ನು ರಾಜ್ಯ ಸರ್ಕಾರವು ಭವಿಷ್ಯದ ಸಾರ್ವಜನಿಕ ಉದ್ದೇಶಗಳಿಗಾಗಿ ಕಾಯ್ದಿರಿಸಿದೆ. ಸರ್ಕಾರಿ ಕಟ್ಟಡಗಳು ಹಾಗೂ ಸಾರ್ವಜನಿಕ ಸೌಲಭ್ಯಗಳ ನಿರ್ಮಾಣಕ್ಕೆ ಬಳಸುವ ಉದ್ದೇಶದಿಂದ ಈ ಜಮೀನನ್ನು ಮೀಸಲಿಟ್ಟಿರುವುದಾಗಿ ಅಧಿಕಾರಿಗಳು ತಿಳಿಸಿದ್ದಾರೆ. ಆದಾಗ್ಯೂ, ಈ ಜಾಗದಲ್ಲಿಯೇ ರಾಧಾಕೃಷ್ಣ ಹಾಗೂ ಅವರ ಪತ್ನಿ ಮನೆ ನಿರ್ಮಾಣಕ್ಕೆ ಮುಂದಾಗಿರುವುದು ವಿವಾದಕ್ಕೆ ಕಾರಣವಾಗಿದೆ. ಮತ್ತೊಂದೆಡೆ, ಗೌಡಗೆರೆ ಗ್ರಾಮಪಂಚಾಯ್ತಿ ಅಧಿಕಾರಿಗಳು ತಮ್ಮ ಅಧಿಕಾರ ವ್ಯಾಪ್ತಿಯನ್ನು ಮೀರಿ ಕಂದಾಯ ಜಮೀನಿಗೆ ಖಾತೆ ಮಾಡಿಕೊಟ್ಟು ಕಟ್ಟಡ ಪರವಾನಿಗೆ ನೀಡಿರುವ ಆರೋಪ ಕೇಳಿಬಂದಿದೆ.


**ಜಿಲ್ಲಾಧಿಕಾರಿ ತನಿಖೆ ಸೂಚನೆ:** ಈ ಬೆಳವಣಿಗೆಗಳ ಹಿನ್ನೆಲೆ ಚಿಕ್ಕಬಳ್ಳಾಪುರ ಜಿಲ್ಲಾಧಿಕಾರಿಗಳು ಪ್ರಕರಣದ ಸಮಗ್ರ ತನಿಖೆಗೆ ಸೂಚನೆ ನೀಡಿದ್ದಾರೆ. ಸಂಬಂಧಿತ ದಾಖಲೆಗಳು, ಖಾತೆ ಮಂಜೂರು ಹಾಗೂ ಕಟ್ಟಡ ಪರವಾನಿಗೆ ನೀಡಿದ ಕ್ರಮಗಳ ಬಗ್ಗೆ ಪರಿಶೀಲನೆ ನಡೆಯಲಿದೆ ಎಂದು ತಿಳಿದುಬಂದಿದೆ.

**ತಹಶೀಲ್ದಾರ್ ಸ್ಪಷ್ಟನೆ:** ಈ ಕುರಿತು ಪ್ರತಿಕ್ರಿಯೆ ನೀಡಿರುವ ಮಂಚೇನಹಳ್ಳಿ ತಹಶೀಲ್ದಾರ್ ಪೂರ್ಣಿಮಾ ಅವರು, "ಸರ್ಕಾರಿ ಜಮೀನನ್ನು ಸಾರ್ವಜನಿಕ ಉದ್ದೇಶಕ್ಕಾಗಿ ಕಾಯ್ದಿರಿಸಲಾಗಿದ್ದು, ಅದರಲ್ಲಿ ಅಕ್ರಮವಾಗಿ ಮನೆ ನಿರ್ಮಾಣ ಮಾಡಲು ಮುಂದಾಗಿರುವುದನ್ನು ಕಾನೂನುಬದ್ಧವಾಗಿ ತಡೆಯಲಾಗಿದೆ. ಈ ಕ್ರಮವನ್ನು ಎದುರಿಸಲು ನನ್ನ ವಿರುದ್ಧ ಡೆತ್‌ನೋಟ್ ಬರೆದಿದ್ದು, ಆತ್ಮಹತ್ಯೆ ಯತ್ನ ನಡೆಸಿರುವುದು ಬೇಸರದ ಸಂಗತಿ" ಎಂದು ತಿಳಿಸಿದ್ದಾರೆ.

**ಗ್ರಾಮಸ್ಥರ ಪ್ರತಿಕ್ರಿಯೆ:** ಗ್ರಾಮಸ್ಥರು ಮಾತನಾಡುತ್ತಾ, "ಸ್ವಂತ ಜಮೀನಿದ್ದರೂ ಸರ್ಕಾರಿ ಜಮೀನಿನಲ್ಲಿ ಮನೆ ಕಟ್ಟಲು ಯತ್ನಿಸಿರುವುದು ತಪ್ಪು. ಸಮಸ್ಯೆಗೆ ಕಾನೂನು ಮಾರ್ಗದಲ್ಲಿ ಪರಿಹಾರ ಹುಡುಕಬೇಕಾಗಿತ್ತು. ಆತ್ಮಹತ್ಯೆ ಹೈಡ್ರಾಮಾ ನಡೆಸುವುದು ಕುಟುಂಬದ ಭವಿಷ್ಯಕ್ಕೂ ಅಪಾಯ" ಎಂದು ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

ಈ ಘಟನೆ ಕಾನೂನು, ಆಡಳಿತ ಹಾಗೂ ವೈಯಕ್ತಿಕ ಹೊಣೆಗಾರಿಕೆಯ ನಡುವೆ ಉದ್ಭವಿಸಿದ ಸಂಘರ್ಷದ ಉದಾಹರಣೆಯಾಗಿ ಪರಿಣಮಿಸಿದ್ದು, ಮುಂದಿನ ತನಿಖೆಯ ಫಲಿತಾಂಶದ ಮೇಲೆ ಪ್ರಕರಣದ ಮುಂದಿನ ಬೆಳವಣಿಗೆಗಳು ಅವಲಂಬಿತವಾಗಿವೆ.

## ಕುಡಿದ ಮತ್ತಿನಲ್ಲಿ ಗೆಳಯನನ್ನೇ ಕಲ್ಲು ಎತ್ತಿ ಹಾಕಿ ಕೊಂದ ಸ್ನೇಹಿತರು





**ಶಿವಮೊಗ್ಗ:**ಮಲೆನಾಡಿನ ಹೆಬ್ಬಾಗಿಲು ಎಂದೇ ಕರೆಯ ಲ್ಪಡುವ ಶಿವಮೊಗ್ಗ ದಲ್ಲಿ ಸ್ನೇಹದ ಹೆಸರಿನಲ್ಲಿ ಆರಂಭವಾದ ಮದ್ಯ ಪಾನದ ಕೂಟವು ರಕ್ತಪಾತದಲ್ಲಿ ಅಂತ್ಯಗೊಂಡ ಭೀಕರ ಘಟನೆ ಬೆಳಕಿಗೆ ಬಂದಿದೆ. ಕ್ಷುಲ್ಲಕ ವಿಚಾರಕ್ಕೆ ಉಂಟಾದ ಜಗಳವು ವಿಕೋಪಕ್ಕೆ ತಿರುಗಿ, ಸ್ನೇಹಿತರೇ ಸೇರಿ ತನ್ನ ಸ್ನೇಹಿತನನ್ನೇ ಕಲ್ಲು ಎತ್ತಿಹಾಕಿ ಬರ್ಬರವಾಗಿ ಹತ್ಯೆ ಮಾಡಿರುವ ಘಟನೆ ಶಿವಮೊಗ್ಗ ತಾಲೂಕಿನ ಗಾಜನೂರು ಗ್ರಾಮದಲ್ಲಿ ನಡೆದಿದೆ.

36 ವರ್ಷದ ಶ್ರೀನಿವಾಸ್ ಈ ಕೃತ್ಯಕ್ಕೆ ಬಲಿಯಾದ ದುರ್ದೈವಿ. ಅವರು ಮೂಲತಃ ಶಿವಮೊಗ್ಗ ನಗರದ ಹೊಸಮನೆ ಪ್ರದೇಶದ ನಿವಾಸಿಯಾಗಿದ್ದು, ಕಳೆದ ಒಂದು ವರ್ಷದಿಂದ ಗಾಜನೂ–ರಿನಲ್ಲಿ ವಾಸಿಸುತ್ತಿದ್ದರು. ಗಾರೆ ಕೆಲಸ ಮಾಡಿಕೊಂಡು ಜೀವನ ಸಾಗಿಸುತ್ತಿದ್ದ ಶ್ರೀನಿವಾಸ್ ಸಾಮಾನ್ಯ ಕಾರ್ಮಿಕನಾಗಿದ್ದರೂ, ಸ್ಥಳೀಯರೊಂದಿಗೆ ಹೊಂದಾಣಿಕೆಯಿಂದ ಬದುಕುತ್ತಿದ್ದ ವ್ಯಕ್ತಿ ಎಂದು ತಿಳಿದುಬಂದಿದೆ.

**ಮದ್ಯಪಾನ ಕೂಟವೇ ಕಾರಣ?:** ನಿನ್ನೆ ರಾತ್ರಿ ಗಾಜನೂರಿನ ಸ್ನೇಹ ಬಾರ್ ಎದುರಿನ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಂಗಳದಲ್ಲಿ ಶ್ರೀನಿವಾಸ್ ಹಾಗೂ ಅವರ ಇಬ್ಬರು ಸ್ನೇಹಿತರು ಸೇರಿ ಮದ್ಯಪಾನದ ಕೂಟ ಆಯೋಜಿಸಿದ್ದರು. ಆರಂಭದಲ್ಲಿ ಸಾಮಾನ್ಯವಾಗಿ ನಡೆದಿದ್ದ ಈ ಕೂಟ, ಮದ್ಯದ ಅಮಲಿನಿಂದ ಹಂತ ಹಂತವಾಗಿ ಗಲಾಟೆಗೆ ತಿರುಗಿದೆ.

ಅಮಲಿನಲ್ಲಿದ್ದ ಸ್ನೇಹಿತರ ನಡುವೆ ಯಾವುದೋ ಕ್ಷುಲ್ಲಕ ವಿಚಾರಕ್ಕೆ ಸಂಬಂಧಿಸಿದಂತೆ ಮಾತಿನ ಚಕಮಕಿ ಶುರುವಾಗಿ, ಅದು ಗಂಭೀರ ಭಿನ್ನಾಭಿ ಪ್ರಾಯವಾಗಿ ಬೆಳವಣಿಗೆ ಯಾಗಿದೆ.

ಮಾತಿನ ಚಕಮಕಿಯು ಗಲಾಟೆಯಾಗಿ ಮಾರ್ಪಟ್ಟಾಗ ಇಬ್ಬರು ಆರೋಪಿಗಳು ಸೇರಿ ಶ್ರೀನಿವಾಸ್ ಮೇಲೆ ಮಾರಕಾಸ್ತ್ರಗಳಿಂದ ಹಲ್ಲೆ ನಡೆಸಿದ್ದಾರೆ. ಅಲ್ಲದೆ, ಹಲ್ಲೆಯ ನಡುವೆಯೇ ಅವರ ಕಾಲನ್ನು ಮಡಚಿ (ಟ್ವಿಸ್ಟ್ ಮಾಡಿ), ಪ್ಯಾಂಟ್ ಬಿಚ್ಚಿ ಅರೆನಗ್ನ ಸ್ಥಿತಿಗೆ ತಂದು ಅಮಾನವೀಯವಾಗಿ ವರ್ತಿಸಿರುವುದಾಗಿ ತಿಳಿದುಬಂದಿದೆ.

ಕೊನೆಯಲ್ಲಿ ತಲೆಯ ಮೇಲೆ ಭಾರಿಯಾದ ಕಲ್ಲು ಎತ್ತಿಹಾಕಿ ಕ್ರೂರವಾಗಿ ಕೊಲೆಗೈದಿದ್ದಾರೆ. ಈ ರೀತಿ ವಿಕೃತವಾಗಿ ಹತ್ಯೆ ಮಾಡಿರುವುದು ಪ್ರಕರಣಕ್ಕೆ ಮತ್ತೊಂದು ಭೀಕರ ಆಯಾಮ ನೀಡಿದೆ.

ಹತ್ಯೆಗೈದ ಬಳಿಕ ಆರೋಪಿಗಳು ಸ್ಥಳದಿಂದ ಪರಾ–ರಿಯಾಗಿದ್ದಾರೆ. ಇಂದು ಬೆಳಿಗ್ಗೆ ಸ್ಥಳೀಯರು ಸಹಕಾರ ಸಂಘದ ಅಂಗಳದಲ್ಲಿ ಶ್ರೀನಿವಾಸ್ ರಕ್ತದ ಮಡಿಲಲ್ಲಿ ಬಿದ್ದಿರುವುದನ್ನು ಕಂಡು ಬೆಚ್ಚಿಬಿದ್ದಿದ್ದಾರೆ. ತಕ್ಷಣ ಪೊಲೀಸರಿಗೆ ಮಾಹಿತಿ ನೀಡಲಾಗಿದೆ.

ಘಟನಾ ಸ್ಥಳಕ್ಕೆ ಶಿವಮೊಗ್ಗ ಜಿಲ್ಲಾ ಪೊಲೀಸ್ ವ–ರಿಷ್ಠಾಧಿಕಾರಿ ನಿಖಿಲ್ ಬಿ. ಹಾಗೂ ತುಂಗಾನಗರ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಸುತ್ತಮುತ್ತಲಿನ ಸಿಸಿ ಕ್ಯಾಮೆರಾ ದೃಶ್ಯಾವಳಿಗಳನ್ನು ಸಂಗ್ರಹಿಸಿ ಪರಿಶೀಲನೆ ಕೈಗೊಳ್ಳಲಾಗಿದೆ.

"ನನ್ನ ತಮ್ಮನನ್ನು ಅವನ ಸ್ನೇಹಿತರೇ ಕೊಂದಿದ್ದಾರೆ. ಅವರಿಗೆ ತಕ್ಕ ಶಿಕ್ಷೆ ಆಗಬೇಕು" ಎಂದು ಮೃತನ ಸಹೋದರಿ ಸುಮಾ ಕಣ್ಣೀರಿಡುತ್ತಾ ಆಗ್ರಹಿಸಿದ್ದಾರೆ. ಕುಟುಂಬದ ಆಕ್ರಂದನ ಸ್ಥಳೀಯರ ಮನಕಲಕುವಂತಾಗಿದೆ.

## "ತಂಬಾಕು ಮುಕ್ತ ಯುವ ಆಂದೋಲನ"ಕ್ಕೆ ಭರ್ಜರಿ ಚಾಲನೆ




**ಬೆಂಗಳೂರು ಗ್ರಾಮಾಂತರ:** ಜಿಲ್ಲಾ ಪಂಚಾಯತ್, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ವತಿಯಿಂದ ದೊಡ್ಡಬಳ್ಳಾಪುರ ತಾಲ್ಲೂಕಿನ ಹಾದ್ರೀಪುರ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಮಧುರನಹೊಸಹಳ್ಳಿ ಗ್ರಾಮದಲ್ಲಿ, "ತಂಬಾಕು ಮುಕ್ತ ಯುವ ಆಂದೋಲನ"ವನ್ನು ಆಯೋಜಿಸಲಾಗಿತ್ತು.

ತಂಬಾಕು ಸೇವನೆಯ ದುಷ್ಪರಿಣಾಮಗಳ ಕುರಿತು ಜಾಗೃತಿ ಮೂಡಿಸಿ ಯುವಜನರನ್ನು ತಂಬಾಕುಮುಕ್ತ ಜೀವನಶೈಲಿ ಅಳವಡಿಸಿಕೊಳ್ಳುವಂತೆ ಅರಿವು ಮೂಡಿಸಲಾಯಿತು. ಗ್ರಾಮದ ಪ್ರಮುಖ ಬಿದಿಗಳಲ್ಲಿ ಜಾಥಾ ನಡೆಸಲಾಯಿತು. ಆನಂತರ ಮನೆಮನೆ ಭೇಟಿ ನೀಡಿ ತಂಬಾಕಿನಿಂದ ಆಗುವಂತ ದುಷ್ಪರಿಣಾಮಗಳ ಕುರಿತು ಮಾಹಿತಿ ತಿಳಿಸಿ, ಅಂಗಡಿ ಮಾಲೀಕರಿಗೆ ತಿಳಿವಳಿಕೆ ನೀಡಿದರು. ಹಾಗೂ ಗ್ರಾಮದ ಯುವಕರು ತಂಬಾಕು ಸೇವನೆ ತ್ಯಜಿಸುವ ಪ್ರತಿಜ್ಞೆ ಮಾಡಿದರು.

ಶಾಲೆಗಳ ಸುತ್ತಮುತ್ತ ಮಾರಾಟ ನಿಷೇಧ ಜಾಗೃತಿಗಾಗಿಗೋಡೆ ಬರಹ, ಬ್ಯಾನರ್, ಪೋಸ್ಟರ್ ಪ್ರದರ್ಶನ "ತಂಬಾಕು ಮುಕ್ತ ಹಳ್ಳಿ" ಸಂದೇಶವನ್ನು ಸಾರ್ವಜನಿಕ ತಿಳಿಸಿದರು.ಈ ವೇಳೆ ಹಾದ್ರೀಪುರ ಗ್ರಾಮ ಪಂಚಾಯ್ತಿ ಅಭಿವೃದ್ಧಿ ಅಧಿಕಾರಿ ನಂದಿನಿ, ಪಂಚಾಯ್ತಿ ಸಿಬ್ಬಂದಿ, ಗ್ರಾಮದ ಯುವಕರು, ಹಿರಿಯರು ಉಪಸ್ಥಿತ–ರಿದ್ದರು.

## ಕರ್ನಾಟಕ ದಲಿತ ಸಂಘರ್ಷ ಸಮಿತಿ(ರಿ )ಬಿ.ಆರ್.ಮಂಜುನಾಥ್ ಅವಿರೋಧವಾಗಿ ಆಯ್ಕೆ



**ಕೃಷ್ಣರಾಜಪೇಟೆ:** ಪಟ್ಟಣದ ಪ್ರವಾಸಿ ಮಂದಿರದಲ್ಲಿ (ಪ್ರೊ.ಬಿ.ಕೃಷ್ಣಪ್ಪ ಸ್ಥಾಪಿತ) ಕರ್ನಾಟಕ ದಲಿತ ಸಂಘರ್ಷ ಸಮಿತಿ(ರಿ) ಮಂಡ್ಯ ಜಿಲ್ಲಾ ಸಂಚಾಲಕರಾದ ಶಿವರಾಜು ಮರಳಿಗ ಅವರ ಅಧ್ಯಕ್ಷತೆಯಲ್ಲಿ ನಡೆದ ತಾಲ್ಲೂಕು ಘಟಕದ ಪದಾಧಿಕಾರಿಗಳ ಆಯ್ಕೆ ಸಮಿತಿ ಸಭೆಯಲ್ಲಿ ಕೃಷ್ಣರಾಜಪೇಟೆ ತಾಲ್ಲೂಕು ಘಟಕಕ್ಕೆ ಪದಾಧಿಕಾರಿಗಳನ್ನು ಅವಿರೋಧವಾಗಿ ಆಯ್ಕೆ ಮಾಡಲಾಯಿತು,

ಜಿಲ್ಲಾ ಸಂಘಟನಾ ಸಂಚಾಲಕರಾಗಿ ಬಿ.ಎಸ್. ರಾಜು, ತಾಲ್ಲೂಕು ಸಂಘಟನಾ ಸಂಚಾಲಕರಾಗಿ ಬಿ.ಜೆ.ಮಂಜು, ಐಪನಹಳ್ಳಿ ರವೀಶ್, ಬಿ.ಎಸ್.ಚೇತನ್, ಸಾಕ್ಷಿಬೀಡು ಪ್ರಸನ್ನ, ಸಿಂಗನಹಳ್ಳಿ ಮುತ್ತುರಾಜು, ಬಸವನಹಳ್ಳಿ ಬಿ.ಲವ, ಹೆಚ್. ಎನ್.ಶೃತಿ, ಬಿ.ಎಸ್.ರೂಪಾ ಅವರುಗಳು ಆಯ್ಕೆಯಾಗಿದ್ದಾರೆ,

ಕಾರ್ಯಕ್ರಮದಲ್ಲಿ ಜಿಲ್ಲಾ ಸಂಘಟನಾ ಸಂಚಾಲಕ ನಿಡಘಟ್ಟ ವೆಂಕಟೇಶ್, ಆರ್.ಸ್ವಾಮಿ, ಬಿ.ಎಂ. ಕೃಷ್ಣಯ್ಯ, ಬಿ.ಕೆ.ರಾಜು, ಕೆ.ಆರ್.ಪೇಟೆ ಸವಿತಾ ಸೇರಿದಂತೆ ಹಲವು ಮುಖಂಡರು ಉಪಸ್ಥಿತರಿದ್ದರು.

ನೂತನ ಪದಾಧಿಕಾರಿಗಳನ್ನು ಅಭಿನಂದಿಸಿ ಮಾತನಾಡಿದ ಜಿಲ್ಲಾ ಸಂಚಾಲಕ ಶಿವರಾಜು ಮರಳಿಗ ಅವರು ರಾಜ್ಯ ಸಮಿತಿಯ ಸೂಚನೆ ಮೇರೆಗೆ ಇಂದು ಕೃಷ್ಣರಾಜಪೇಟೆ ತಾಲ್ಲೂಕು ಘಟಕದ ಸಂಚಾಲಕರನ್ನಾಗಿ ಬಿ.ಆರ್.ಮಂಜುನಾಥ್ ಅವರನ್ನು ಮತ್ತು ಜಿಲ್ಲಾ ಸಂಘಟನಾ ಸಂಚಾಲಕರಾದ ಬಿ.ಎಸ್. ರಾಜು ಹಾಗೂ ಇತರೆ ಪದಾಧಿಕಾರಿಗಳನ್ನು ಅವಿರೋಧವಾಗಿ ಆಯ್ಕೆ ಮಾಡಲಾಯಿತು,

ನೂತನ ಪದಾಧಿಕಾರಿಗಳು ತಾಲ್ಲೂಕಿನಲ್ಲಿ ದಲಿತರು, ಹಿಂದುಳಿದ ವರ್ಗದವರು ಹಾಗೂ ಶೋಷಿತ ವರ್ಗಗಳ ಕುಂದು ಕೊರತೆಗಳನ್ನು ಆಲಿಸಬೇಕು. ಸಮಸ್ಯೆಗೆ ಸೂಕ್ತ ಪರಿಹಾರ ರೂಪಿಸಲು ಹೋರಾಟಗಳನ್ನು ಕೈಗೊಳ್ಳಬೇಕು. ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಪ್ರತಿಭಟನೆ ನಡೆಸಿ ಸಮಸ್ಯೆಗಳಿಗೆ ಪರಿಹಾರ ರೂಪಿಸಲು ಮುಂದಾಗಬೇಕು. ದಲಿತ ಬಂಧುಗಳಿಗೆ ಸಂವಿಧಾನ ಬದ್ದವಾಗಿ ಸಿಗಬೇಕಾದ ಸರ್ಕಾರಿ ಸೌಲಭ್ಯಗಳನ್ನು ಕೊಡಿಸಲು ಸೂಕ್ತ ಕ್ರಮ ವಹಿಸಬೇಕು. ದಲಿತರ ಸೌಲಭ್ಯಗಳನ್ನು ದುರುಪಯೋಗ ಪಡಿಸಿಕೊಂಡಿರುವುದು ಕಂಡು ಬಂದರೆ ಅಂತಹ ಅಧಿಕಾರಿಗಳ ವಿರುದ್ಧ ಹೋರಾಟ ರೂಪಿಸಬೇಕು ಎಂದು ಸಲಹೆ ನೀಡಿದರು,

ನೂತನ ತಾಲ್ಲೂಕು ಕರ್ನಾಟಕ ದಲಿತ ಸಂಘರ್ಷ ಸಮಿತಿಯ ಸಂಚಾಲಕ ಬಿ.ಆರ್.ಮಂಜುನಾಥ್ ಮಾತನಾಡಿ ನನಗೆ ವಹಿಸಿರುವ ಜವಾಬ್ದಾರಿಯನ್ನು ಪ್ರಾಮಾಣಿಕವಾಗಿ ಅರ್ಪಣಾ ಭಾವನೆಯಿಂದ ನಿರ್ವಹಣೆ ಮಾಡಿ ತಾಲ್ಲೂಕಿನಲ್ಲಿ ನೊಂದವ–ರಿಗೆ ಧ್ವನಿಯಾಗಿ ಕೆಲಸ ಮಾಡುವ ಮೂಲಕ ತಮ್ಮ ನಂಬಿಕೆಯನ್ನು ಉಳಿಸಿಕೊಳ್ಳುತ್ತೇನೆ ಎಂದು ಭರವಸೆ ನೀಡಿದರು,

ಜಿಲ್ಲಾ ಸಂಘಟನಾ ಸಂಚಾಲಕ ಬಿ.ಎಸ್.ರಾಜು ಮಾತನಾಡಿ ನನಗೆ ಸಿಕ್ಕಿರುವ ಜವಾಬ್ದಾರಿಯನ್ನು ಅತ್ಯಂತ ಪ್ರಾಮಾಣಿಕವಾಗಿ ನಿರ್ವಹಣೆ ಮಾಡುತ್ತೇನೆ. ದಲಿತರು ಮತ್ತು ಶೋಷಿತ ವರ್ಗಗಳನ್ನು ಸಂಘಟಿಸಿ ಸಂಘಟನೆಯನ್ನು ಬಲಪಡಿಸಲು ಮುಂದಾಗುತ್ತೇನೆ. ದಲಿತರನ್ನು ಸಮಾಜದ ಮುಖ್ಯ ವಾಹಿನಿಗೆ ತರಲು ಅಂಬೇಡ್ಕರ್ ಅವರ ಆಶಯದಂತೆ ಹೋರಾಟದಲ್ಲಿ ತೊಡಗಿಸಿಕೊಳ್ಳುತ್ತೇನೆ ಎಂದು ತಿಳಿಸಿದರು,

## ಫೆ.20, 21, 22ರವರಗೆ "ದೊಡ್ಡಬಳ್ಳಾಪುರ ಸೀರೆ ಸಂತೆ"– ಶಾಸಕ ಧೀರಜ್ ಮುನಿರಾಜ್




**ದೊಡ್ಡಬಳ್ಳಾಪುರ:** ಫೆ.20, 21, 22ರವರಗೆ "ದೊಡ್ಡಬಳ್ಳಾಪುರ ಸೀರೆ ಸಂತೆ" ಕಾರ್ಯಕ್ರಮವನ್ನು ದೊಡ್ಡಬಳ್ಳಾಪುರ ನಗರದ ಭಗತ್ ಸಿಂಗ್ ಕ್ರೀಡಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಶಾಸಕ ಧೀರಜ್ ಮುನಿರಾಜ್ ಅವರು ಹೇಳಿದರು..

ನಗರದ ಜಿಲ್ಲಾ ಬಿಜೆಪಿ ಕಾರ್ಯಾಲಯದಲ್ಲಿ ಹಮ್ಮಿಕೊಂಡಿದ್ದ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಅವರು, ರೈತರು, ನೇಕಾರರು ದೇಶದ ಎರಡು ಕಣ್ಣುಗಳು. ದೊಡ್ಡಬಳ್ಳಾಪುರದಲ್ಲಿ ನೇಕಾರಿಕೆ, ಗುಡಿ ಕೈಗಾರಿಕೆ ನಮ್ಮೆಯ ಕುಲಕಸುಬುಗಳಾಗಿವೆ. ದೊಡ್ಡಬಳ್ಳಾಪುರಕ್ಕೆ ಮ್ಯಾಂಚೆಸ್ಟರ್ ಆಫ್ ಇಂಡಿಯಾ ಬಿರುದು ಬಂದಿದೆ.. ಎಲ್ಲರು ನೇಕಾರರ ಹಿತಕ್ಕಾಗಿ ಕೆಲಸ ಮಾಡುತ್ತಿದ್ದಾರೆ ಎಂದರು.

ಸೀರೆ ಎನ್ನುವುದು ಕೇವಲ ವಸ್ತುವಲ್ಲ, ಮಹಿಳೆಯರ ಭಾವನಾತ್ಮಕ ವಸ್ತು. ಪ್ರಸ್ತುತ ನೇಕಾರರ ಜೀವನ ಅಸ್ತವ್ಯಸ್ತವಾಗುತ್ತಿದೆ. ಬಂಡವಾಳಶಾಹಿಗಳಿಂದ ನೇಕಾರರಿಗೆ ತೊಂದರೆ ಆಗುತ್ತಿದೆ. ಎಲ್ಲರಿಗೂ ಅದರಲ್ಲೂ ಬೆಂಗಳೂರಿನ ಜನತಗೆ ದೊಡ್ಡಬಳ್ಳಾಪುರ ಸೀರೆ ಪರಿಚಯ ಮಾಡಬೇಕು. ಫೆ.22ರಂದು ಕೊಂಗಾಡಿಯಪ್ಪ ಜನ್ಮದಿನದ ಅಂಗವಾಗಿ ದೊಡ್ಡಬಳ್ಳಾಪುರ ಸೀರೆಗಳ ವೈಶಿಷ್ಟ್ಯಗಳ ಬಗ್ಗೆ ಪರಿಚಯ ಮಾಡುವ ಉದ್ದೇಶವಿದೆ ಎಂದು ಹೇಳಿದರು...

ಕಾರ್ಯಕ್ರಮದಲ್ಲಿ ಒಟ್ಟು 54 ಸೀರೆ ಮಳಿಗೆಗಳನ್ನು ಇಡಲಾಗುತ್ತದೆ. ಉತ್ತಮ ಸೀರೆಗಳಿಗೆ ಬಹುಮಾನ ವಿತರಣೆ ಮಾಡಲಾಗುವುದು. ಉದ್ಘಾಟನಾ ಕಾರ್ಯಕ್ರಮಕ್ಕೆ 'ಬಿಗ್ ಬಾಸ್ ಕನ್ನಡ ಸೀಸನ್ 12' ರಿಯಾಲಿಟಿ ಶೋ ವಿನ್ನರ್ ಗಿಲ್ಲಿ ನಟ ಮುಖ್ಯ ಅತಿಥಿಯಾಗಿ ಆಗಮಿಸಲಿದ್ದಾರೆ ಎಂದು ತಿಳಿಸಿದರು.

ಸೀರೆ ಸಂತೆ ಕಾರ್ಯಕ್ರಮದಲ್ಲಿ ಯಾವುದೇ ಶುಲ್ಕ ಇರುವುದಿಲ್ಲ. ಮಳಿಗೆಗಳಲ್ಲಿ ದೊಡ್ಡಬಳ್ಳಾಪುರದಲ್ಲೇ ನೇಯ್ದಿರುವ ಸೀರೆಗಳನ್ನು ಮಾತ್ರ ಪ್ರದರ್ಶನಕ್ಕೆ ಇಡಲು ಅವಕಾಶ ಕಲ್ಪಿಸಲಾಗಿದೆ. ಮಳಿಗೆಗಳನ್ನು ಇಡಲು ಹಾಗೂ ಕಾರ್ಯಕ್ರಮಕ್ಕೆ ಆಗಮಿಸುವವರಿಗೆ ಯಾವುದೇ ಶುಲ್ಕ ಇರುವುದಿಲ್ಲ ಎಂದರು.

ಮೂರು ದಿನ ವಿವಿಧ ಕಲಾ ತಂಡಗಳಿಂದ ನಗೆ ಕಾರ್ಯಕ್ರಮ, ನೃತ್ಯ ಕಾರ್ಯಕ್ರಮ, ರಸ ಮಂಜರಿ, ಮಕ್ಕಳ ಫ್ಯಾಷನ್ ಶೋ ಕಾರ್ಯಕ್ರಮ ಸೇರಿದಂತೆ ಇತರೆ ಮನರಂಜನಾ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು ಎಂದರು.

ಗಿಲ್ಲಿ ನಟ, ಪ್ರಾಣೇಶ್, ರಘು ದೀಕ್ಷಿತ್, ಕಾಮಿಡಿ ಕಿಲಾಡಿಗಳು ಶೋ ನ ಕಲಾವಿದರು ಸೇರಿದಂತೆ ಇತರರು ಮನರಂಜನೆ ಕಾರ್ಯಕ್ರಮಗಳನ್ನು ನಡೆಸಿಕೊಡಲಿದ್ದಾರೆ ಎಂದು ಹೇಳಿದರು..

ಈ ವೇಳೆ ದೊಡ್ಡಬಳ್ಳಾಪುರ ಸೀರೆ ಸಂತೆ ಸಮಿತಿಯ ಗೌರವ ಅಧ್ಯಕ್ಷ ಎಂಜಿ ಶ್ರೀನಿವಾಸ, ಅಧ್ಯಕ್ಷ ಪಿಸಿ ವೆಂಕಟೇಶ್, ಹಿರಿಯ ಮುಖಂಡ ಕೆಎಂ ಹನುಮಂತರಾಯಪ್ಪ, ಪಿಎಲ್ಡಿ ಬ್ಯಾಂಕ್ ಮಾಜಿ ಅಧ್ಯಕ್ಷ ಲಕ್ಷ್ಮೀನಾರಾಯಣ್, ಪುಷ್ಪಶಿವಶಂಕರ್, ಡಿ.ಎಂ ಚಂದ್ರಶೇಖರ್, ಬಿಸಿ ನಾರಾಯಣಸ್ವಾಮಿ, ಬಂತಿ ವೆಂಕಟೇಶ, ಸಿ ನಾರಾಯಣಸ್ವಾಮಿ, ನಾಗೇಶ್, ಮುದ್ದಪ್ಪ, ಗೋಪಿ, ಜಗದೀಶ್ ಇತರರು ಇದ್ದರು.

## ತಡೆಗೋಡೆಗೆ ಕ್ರೂಸರ್ ವಾಹನ ಡಿಕ್ಕಿ ಸ್ಥಳದಲ್ಲಿಯೇ ಮೂವರು ಸಾವು!



**ಯಾದಗಿರಿ:**ಆಂಧ್ರಪ್ರದೇಶದ ಜಡಚರ್ಲಾ ಸಮೀಪದ ರಾಜ್ಯ ಹೆದ್ದಾರಿಯಲ್ಲಿ ಸಂಭವಿಸಿದ ಭೀಕರ ರಸ್ತೆ ಅಪಘಾತದಲ್ಲಿ ಯಾದಗಿರಿ ಜಿಲ್ಲೆಯ ಮೂವರು ಸ್ಥಳದಲ್ಲಿಯೇ ಮೃತಪಟ್ಟಿರುವ ದಾರುಣ ಘಟನೆ ನಡೆದಿದೆ. ಶ್ರೀಶೈಲ ಮಲ್ಲಿಕಾರ್ಜುನ ದರ್ಶನಕ್ಕಾಗಿ ಹೊರಟಿದ್ದ ಕುಟುಂಬದ ಪ್ರಯಾಣವೇ ಮರಣಯಾತ್ರೆಯಾಗಿ ಮಾರ್ಪಟ್ಟಿದೆ.

**ದರ್ಶನಕ್ಕೆ ಹೊರಟ ಕುಟುಂಬದ ಮೇಲೆ ಕಹಿ ವಿಧಿ:** ಯಾದಗಿರಿ ಜಿಲ್ಲೆಯ ಶಾಹಪುರ ತಾಲೂಕಿನ ಗೋಗಿ ಗ್ರಾಮದ ನಿವಾಸಿಗಳಾದ ಕುಟುಂಬವು ಯಾದಗಿರಿ ನಗರದಲ್ಲಿ ಮೊಮ್ಮಗನ ಜವ ಕಾರ್ಯಕ್ರಮವನ್ನು ನೆರವೇರಿಸಿಕೊಂಡು ಬಳಿಕ ಶ್ರೀಶೈಲದ ಶ್ರೀ ಮಲ್ಲಿಕಾರ್ಜುನ ಸ್ವಾಮಿ ದರ್ಶನಕ್ಕೆ ತೆರಳಲು ನಿರ್ಧರಿಸಿದ್ದರು. ಸಂತಸದ ಕ್ಷಣಗಳ ಬಳಿಕ ಧಾರ್ಮಿಕ ಯಾತ್ರೆಗೆ ಹೊರಟಿದ್ದ ಈ ಕುಟುಂಬದ ಮೇಲೆ ವಿಧಿಯ ಕಹಿ ಆಟವಾಡಿದೆ.

ಕುಟುಂಬದವರು ಕ್ರೂಸರ್ ವಾಹನದಲ್ಲಿ ಪ್ರಯಾಣಿಸ ುತ್ತಿದ್ದರು. ಆಂಧ್ರಪ್ರದೇಶದ ಜಡಚರ್ಲಾ ಸಮೀಪದ ರಾಜ್ಯ ಹೆದ್ದಾರಿಯಲ್ಲಿ ಸಾಗುತ್ತಿದ್ದಾಗ ವಾಹನ ತಡೆಗೋಡೆಗೆ ಭಾರೀ ವೇಗದಲ್ಲಿ ಡಿಕ್ಕಿಯಾಗಿದೆ. ಡಿಕ್ಕಿ ಹೊಡೆತದ ತೀವ್ರತೆಗೆ ವಾಹನದ ಮುಂಭಾಗ ಸಂಪೂರ್ಣ ಜಜ್ಜಿಹೋಗಿದ್ದು, ಪ್ರಯಾಣಿಕರಿಗೆ ಗಂಭೀರ ಗಾಯಗಳಾಗಿವೆ.

ಪ್ರಾಥಮಿಕ ಮಾಹಿತಿಯ ಪ್ರಕಾರ, ವಾಹನ ಚಲಾಯಿಸುತ್ತಿದ್ದ ಚಾಲಕ ನಿದ್ದೆ ಮಂಪರಿನಲ್ಲಿದ್ದ ಕಾರಣ ನಿಯಂತ್ರಣ ತಪ್ಪಿ ಅಪಘಾತ ಸಂಭವಿಸಿರಬಹುದು ಎಂಬ ಶಂಕೆ ವ್ಯಕ್ತವಾಗಿದೆ. ಹೆದ್ದಾರಿಯಲ್ಲಿ ಸಾಗುತ್ತಿದ್ದ ವಾಹನ ತಕ್ಷಣ ನಿಯಂತ್ರಣ ತಪ್ಪಿ ತಡೆಗೋಡೆಗೆ ಡಿಕ್ಕಿಯಾಗಿರುವುದು ಘಟನೆಗೆ ಕಾರಣವೆಂದು ಹೇಳಲಾಗುತ್ತಿದೆ.

ಈ ಭೀಕರ ಅಪಘಾತದಲ್ಲಿ ರಾಮರೆಡ್ಡಿ (52), ಅವರ ಪತ್ನಿ ಮೇಘಾ (50) ಹಾಗೂ ವಿಜಯಪುರ ಮೂಲದ ಮಹದೇವಪ್ಪ (65) ಸ್ಥಳದಲ್ಲಿಯೇ ಮೃತಪಟ್ಟಿದ್ದಾರೆ. ಮೂವರ ಸಾವಿನಿಂದ ಕುಟುಂಬ ಹಾಗೂ ಗೋಗಿ ಗ್ರಾಮದಲ್ಲಿ ಶೋಕ ಮಡುಗಟ್ಟಿದೆ.

ಮೃತರು ಧಾರ್ಮಿಕ ಯಾತ್ರೆಗೆ ತೆರಳುತ್ತಿದ್ದ ಸಂದರ್ಭದಲ್ಲೇ ಪ್ರಾಣ ಕಳೆದುಕೊಂಡಿರುವುದು ಗ್ರಾಮಸ್ಥರ ಮನಕಲಕುವಂತಾಗಿದೆ.

ಅಪಘಾತದಲ್ಲಿ ಇನ್ನೂ ಐವರು ಗಂಭೀರವಾಗಿ ಗಾಯಗೊಂಡಿದ್ದು, ಅವರನ್ನು ಸಮೀಪದ ಆಸ್ಪತ್ರೆಗೆ ದಾಖಲಿಸಲಾಗಿದೆ. ಗಾಯಾಳುಗಳು ಚಿಕಿತ್ಸೆ ಪಡೆಯುತ್ತಿದ್ದು, ಕೆಲವರ ಸ್ಥಿತಿ ಗಂಭೀರವಾಗಿದೆ ಎನ್ನಲಾಗಿದೆ. ಸ್ಥಳೀಯ ಪೊಲೀಸರು ಹಾಗೂ ತುರ್ತು ಸೇವಾ ಸಿಬ್ಬಂದಿ ತಕ್ಷಣ ಸ್ಥಳಕ್ಕೆ ಆಗಮಿಸಿ ರಕ್ಷಣಾ ಕಾರ್ಯಾಚರಣೆ ನಡೆಸಿದ್ದಾರೆ.

ಒಂದೇ ಕುಟುಂಬದ ಮೂವರು ಸದಸ್ಯರು ದುರ್ಘಟನೆಯಲ್ಲಿ ಮೃತಪಟ್ಟಿರುವ ಸುದ್ದಿ ತಿಳಿದ ತಕ್ಷಣ ಗೋಗಿ ಗ್ರಾಮದಲ್ಲಿ ಆಕ್ರಂದನ ಮೇಳೈಸಿದೆ. ಮೊಮ್ಮಗನ ಜವಳ ಮುಗಿಸಿಕೊಂಡು ಸಂತಸದೊಂದಿಗೆ ದರ್ಶನಕ್ಕೆ ಹೊರಟಿದ್ದ ಕುಟುಂಬಕ್ಕೆ ಇಂತಹ ದುರಂತ ಸಂಭವಿಸಿರುವುದು ಎಲ್ಲರಲ್ಲೂ ವಿಷಾದ ಮೂಡಿಸಿದೆ.

ಪೊಲೀಸರು ಪ್ರಕರಣ ದಾಖಲಿಸಿಕೊಂಡು ಅಪಘಾತದ ನಿಖರ ಕಾರಣವನ್ನು ತನಿಖೆ ಮಾಡುತ್ತಿದ್ದಾರೆ. ಚಾಲಕನ ನಿದ್ದೆ ಮಂಪರು ಕಾರಣವಾಗಿರಬಹುದೆಂಬ ಅನುಮಾನ ವ್ಯಕ್ತವಾಗಿದ್ದು, ಹೆಚ್ಚಿನ ಪರಿಶೀಲನೆ ನಡೆಯುತ್ತಿದೆ.

## ಹೆತ್ತ ತಾಯಿಯನ್ನೇ ಕೊಂದು ಹೃದಯಾಘಾತದ ಕಥೆ ಕಟ್ಟಿದ್ದ ಮಗಳು





**ತುಮಕೂರು:**ನಗರದ ಬಂಡೇಪಾಳ್ಯ ಬಳಿಯ ಶ್ರೀನಗರ ನಿವಾಸಿ ಪುಷ್ಪಲತಾ ಸ್ವಂತ ಸೂರು ಕಟ್ಟಿಕೊಂಡು ಮಗಳು ಸುಚಿತ್ರಾ ಹಾಗೂ ಅಳಿಯನ ಜೊತೆ ವಾಸವಿದ್ದರು. ಕಳೆದ ಕೆಲ ದಿನಗಳಿಂದ ಮಂಡಿನೋವು ಎಂದು ಹಾಸಿಗೆ ಹಿಡಿದಿದ್ದರು. ಫೆಬ್ರವರಿ 11 ರಂದು ರಾತ್ರಿ ನಿಗೂಢವಾಗಿ ಸಾವನಪ್ಪಿದ್ದಾರೆ. ಆಕೆಯ ಜೊತೆಗೆ ವಾಸವಿದ್ದ ಮಗಳು ಹೃದಯಾಘಾತ ಎಂದು ಅಂತ್ಯಕ್ರಿಯೆ ಮಾಡಲು ಮುಂದಾಗಿದ್ದಳು. ಆದರೆ, ಅದೇ ಸಮಯಕ್ಕೆ, ಕೆಲವು ಮಂದಿ ಸ್ಥಳೀಯರು ಅನುಮಾನದಿಂದ ನೀಡಿದ ಮಾಹಿತಿ ಮೇರೆಗೆ ಸ್ಥಳಕ್ಕೆ ಬಂದ ಪೊಲೀಸರು ಸಾವಿನ ಹಿಂದಿನ ಅಸಲಿ ಸತ್ಯ ಬಯಲು ಮಾಡಿದ್ದಾರೆ. ಪುಷ್ಪಲತಾ ಹೃದಯಾಘಾತದಿಂದ ಸಾವನ್ನಪ್ಪಿಲ್ಲ, ಕೊಲೆಯಾಗಿದ್ದಾರೆ ಎಂಬುದನ್ನು ಬಯಲುಮಾಡಿದ್ದಾರೆ. ಪುಷ್ಪಲತಾರನ್ನು ಕೊಲೆ ಮಾಡಿದ್ದು, ಮತ್ಯಾರೂ ಅಲ್ಲ. ಆಕೆಯ ಮಗಳೇ!

ಸುಚಿತ್ರಾ ಹಾಗೂ ಆಕೆಯ ಪತಿ ಸುರೇಶ್ ಸಹ ಪುಷ್ಪಲತಾ ಮನೆಯಲ್ಲಿಯೇ ವಾಸವಿದ್ದರು. ಸುರೇಶ ಕೊರಿಯರ್ ಕಂಪನಿಯಲ್ಲಿ ಕೆಲಸ ಮಾಡುತಿದ್ದ. ಆತನ ದುಡಿಮೆಯಲ್ಲೇ ಜೀವನ ಸಾಗುತಿತ್ತು ಎನ್ನಲಾಗಿದೆ. ಒಂದು ವರ್ಷದ ಹಿಂದೆ ಇದ್ದಕಿದ್ದಂತೆ ಆರೋಗ್ಯ ಸಮಸ್ಯೆಗೆ ಒಳಗಾದ ಪುಷ್ಪಲತಾ ಗಂಡ ಬಾಬು ನಾಯಕ್ ಮೃತಪಟ್ಟಿದ್ದರು. ತಂದೆಯ ಮುದ್ದಿನ ಮಗಳು ಸುಚಿತ್ರಾ, ಅವರನ್ನು ಕಳೆದುಕೊಂಡಿದ್ದ ದುಃಖದಲ್ಲಿದ್ದ ಜ್ಯೋತಿಷಿಯೊಬ್ಬರ ಭೇಟಿ ಮಾಡಿದ್ದಳು. ಈ ವೇಳೆ ಬಾಬು ಸಾವಿಗೆ ಆತನ ಪತ್ನಿಯೇ ಕಾರಣ. ಪುಷ್ಪಲತಾ ಮಾಟಮಂತ್ರ ಮಾಡಿಸಿದ್ದರು. ನಿನಗೂ ಅವರಿಂದ ಕಂಠಕ ಇದೆ ಎಂದು ಜ್ಯೋತಿಷಿ ಹೇಳಿದ್ದರು ಎನ್ನಲಾಗಿದೆ.

ಈ ಮಾತು ಕೇಳಿದ ಸುಚಿತ್ರಾ, ತನ್ನ ಪ್ರೀತಿಯ ತಂದೆಯನ್ನು ಕೊಂದಿದ್ದಾಳೆಂಬ ಅಲೋಚನೆ ಹಾಗೂ ತಾನೂ ಈಕೆಯಿಂದ ಸಾಯಬಹುದೆಂಬ ಆತಂಕದಲ್ಲಿ ಫೆಬ್ರವರಿ 11ರ ರಾತ್ರಿ ಊಟ ಮಾಡಿ ಮಲಗಿದ್ದ ತಾಯಿಯನ್ನು ದಿಂಬಿನಿಂದ ಉಸಿರುಗಟ್ಟಿಸಿ ಸಾಯಿಸಿದ್ದಾಳೆ. ಈ ವೇಳೆ ಹಲ್ಲೆ ಸಹ ಮಾಡಿದ್ದಳು ಎನ್ನಲಾಗಿದ್ದು, ಮುಖದಲ್ಲಿ ರಕ್ತಕಲೆಗಳು ಕಾಣಿಸಿವೆ. ಈ ಎಲ್ಲಾ ವಿಚಾರ ಗೊತ್ತಿದ್ದ ಸುಚಿತ್ರಾ ಗಂಡ ಮೌನವಹಿಸಿದ್ದ. ಪೊಲೀಸರ ತನಿಖೆ ವೇಳೆ ಆತ ಸಹ ಪರೋಕ್ಷವಾಗಿ ಶಾಮೀಲಾಗಿರುವ ಅಂಶಗಳು ಕಂಡು ಬಂದಿವೆ. ಸದ್ಯ ಸುಚಿತ್ರಾ ಹಾಗೂ ಆಕೆಯ ಪತಿ ಸುರೇಶ್ ಅನ್ನು ಕ್ಯಾತಸಂದ್ರ ಪೊಲೀಸರು ಬಂಧಿಸಿದ್ದಾರೆ.

**ಹಣದ ವಿಚಾರವೇ ಕಾರಣವಾಯ್ತಾ?:** ಕೊಲೆ ಮಾಡಿರುವುದಾಗಿ ಕ್ಯಾತಸಂದ್ರ ಪೊಲೀಸರ ವಿಚಾರಣೆ ವೇಳೆ ಒಪ್ಪಿಕೊಂಡಿರುವ ಸುಚಿತ್ರಾ ಜ್ಯೋತಿಷಿ ಕಥೆ ಹೇಳಿದ್ದಾಳೆ. ಆದರೆ, ಅದರ ಜತೆಗೆ ಒಂದಷ್ಟು ಹಣದ ವಿಚಾರ ಸಹ ಕಾರಣ ಇರಬಹುದೆಂಬ ಶಂಕೆ ವ್ಯಕ್ತವಾಗಿದೆ. ಇತ್ತೀಚೆಗೆ ಜಾಗ ಮಾರಿ ಬಂದ ಲಕ್ಷಾಂತರ ರೂ. ಹಣವನ್ನು ಪುಷ್ಪಲತಾ ತಾನೇ ಇಟ್ಟುಕೊಂಡಿದ್ದಳು ಎನ್ನಲಾಗಿದೆ. ಅದೇ ವಿಚಾರವಾಗಿ ಜಗಳ ನಡೆದು ಕೊಲೆ ಮಾಡಿರುವ ಶಂಕೆ ವ್ಯಕ್ತವಾಗಿದ್ದು, ಪೊಲೀಸರು ಎಲ್ಲ ಆಯಾಮಗಳಿಂದ ತನಿಖೆ ನಡೆಸುತ್ತಿದ್ದಾರೆ.

ತಾನೇ ಕೊಂದು ಕಥೆ ಕಟ್ಟಿದ್ದ ಸುಚಿತ್ರಾ, ತಾವು ವಾಸವಿದ್ದ ಶ್ರೀನಗರದ ಮನೆಯಿಂದ ತುಮಕೂರು ತಾಲ್ಲೂಕಿನ ಅನುಪನಹಳ್ಳಿಯ ಸಂಬಂಧಿಕರ ಮನೆಗೆ ಬೆಳ್ಳಂಬೆಳಿಗ್ಗೆಯೇ ಶವ ತಂದಿದ್ದು, ಯಾರಿಗೂ ಗೊತ್ತಾಗದ ರೀತಿ ಎಲ್ಲರ ಸಮ್ಮುಖದಲ್ಲಿ ಅಂತ್ಯಕ್ರಿಯೆ ಮಾಡಲು ಮುಂದಾಗಿದ್ದಳು ಎಂಬುದೂ ವಿಚಾರಣೆ ವೇಳೆ ಗೊತ್ತಾಗಿದೆ. ಈ ವಿಚಾರ ತಿಳಿದ ಸಂಬಂಧಿಕರು ಆಘಾತಕ್ಕೊಳಗಾಗಿದ್ದಾರೆ.

**ಪೊಲೀಸರು ಎಂಟ್ರಿಯಾಗಲು ಕಾರಣವೇನು?** ಇತ್ತೀಚೆಗೆ ಶ್ರೀನಗರದ ಬಳಿ ತಾಯಿ ಹಾಗೂ ಮಗಳ ನಡುವೆ ಗಲಾಟೆ ನಡೆದಿತ್ತು ಎನ್ನಲಾಗಿದೆ. ಹೀಗಾಗಿ ಪುಷ್ಪಲತಾ ಸಾವಿ ವಿಚಾರ ತಿಳಿದವರು ಮೊದಲು ಪೊಲೀಸರಿಗೆ ಮಾಹಿತಿ ನೀಡಿ ಬಳಿಕ ಶವ ಹೂಳುವ ಸಂದರ್ಭದಲ್ಲಿ ಗಲಾಟೆ ಮಾಡಿದ್ದರು ಎನ್ನಲಾಗಿದೆ. ಆ ಬಳಿಕ ಬಂದ ಪೊಲೀಸರು ನಡೆಸಿದ ವಿಚಾರಣೆ ವೇಳೆ ಕೊಲೆ ಸಂಗತಿ ಬಯಲಾಗಿದೆ. ಆದರೆ, ಜ್ಯೋತಿಷಿ ಹೇಳಿದ ಕಾರಣಕ್ಕೆ ಕೊಲೆಯಾಯ್ತಾ ಅಥವಾ ಹಣಕ್ಕಾಗಿ ಹತ್ಯೆಯಾಯಿತಾ ಎಂಬ ವಿಚಾರ ತನಿಖೆಯಿಂದ ಬಯಲಾಗಬೇಕಿದೆ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203,
Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

# ಹಾಡಹಗಲೇ ಮನೆಗೆ ನುಗ್ಗಿದ ಕಳ್ಳನಿಗೆ ಬಿತ್ತು ಗೂಸಾ



**ಶಿವಮೊಗ್ಗ:**ಹಾಡಹಗಲೇ ಮನೆಗೆ ನುಗ್ಗಿ ಕಳ್ಳತನ ನಡೆಸಿ ಪರಾರಿಯಾಗಲು ಯತ್ನಿಸಿದ್ದ ಆರೋಪಿಯನ್ನು ಗ್ರಾಮಸ್ಥರು ಹಿಡಿದು ಹಿಗ್ಗಾಮುಗ್ಗವಾಗಿ ಥಳಿಸಿ, ಅರೆಬೆತ್ತಲೆಗೊಳಿಸಿ ಬಳಿಕ ಪೊಲೀಸ್ ಠಾಣೆಗೆ ಒಪ್ಪಿಸಿರುವ ಘಟನೆ ಶಿವಮೊಗ್ಗ ಜಿಲ್ಲೆಯ ಸಾಗರ ತಾಲೂಕಿನ ಹೊಂಕೇರಿ ಗ್ರಾಮದಲ್ಲಿ ನಡೆದಿದೆ. ಘಟನೆ ಗ್ರಾಮದಲ್ಲಿ ಕೆಲಕಾಲ ಉದ್ವಿಗ್ನ ವಾತಾವರಣಕ್ಕೆ ಕಾರಣವಾಗಿದೆ.

ಸಾಗರ ತಾಲೂಕಿನ ಕಾನಲೆ ಗ್ರಾಮ ಪಂಚಾಯಿತಿ ವ್ಯಾಪ್ತಿಗೆ ಸೇರಿದ ಹೊಂಕೇರಿ ಗ್ರಾಮದಲ್ಲಿ ಈ ಘಟನೆ ನಡೆದಿದೆ. ಗ್ರಾಮದ ರೈತ ಕಬ್ಬಳ್ಳಿ ಹುಚ್ಚಪ್ಪ ಅವರ ಮನೆಯಲ್ಲಿ ಮಧ್ಯಾಹ್ನ ವೇಳೆಯಲ್ಲಿ ಯಾರೂ ಇಲ್ಲದ ಸಂದರ್ಭವನ್ನು ದುರುಪಯೋಗಪಡಿಸಿಕೊಂಡು ಆರೋಪಿಯೊಬ್ಬ ಮನೆಗೆ ನುಗ್ಗಿದ್ದಾನೆ ಎನ್ನಲಾಗಿದೆ.

ಮನೆಯ ಕಿಟಕಿಗಳು ಹಾಗೂ ಬಾಗಿಲುಗಳನ್ನು ಮುರಿದು ಒಳಗೆ ಪ್ರವೇಶಿಸಿದ ಆತ, ಮನೆಯಲ್ಲಿದ್ದ ಸುಮಾರು 50 ಸಾವಿರ ನಗದು ಹಣ ಹಾಗೂ ಕೆಲವು ಚಿನ್ನಾಭರಣಗಳನ್ನು ಕದ್ದಿದ್ದಾನೆ. ಈ ನಗದು ಹಣವನ್ನು ರೈತನು ಇತ್ತೀಚೆಗೆ ಬೆಲ್ಲ ಮಾರಾಟದಿಂದ ಸಂಗ್ರಹಿಸಿಕೊಂಡಿದ್ದ ಎಂದು ಕುಟುಂಬದವರು ತಿಳಿಸಿದ್ದಾರೆ.

ಕಳ್ಳತನ ನಡೆಸಿದ ಬಳಿಕ ಆರೋಪಿಯು ಸ್ಥಳದಿಂದ ತಪ್ಪಿಸಿಕೊಳ್ಳಲು ಯತ್ನಿಸಿದ್ದಾನೆ. ಆದರೆ ಗ್ರಾಮದಲ್ಲಿ ಅಪರಿಚಿತ ವ್ಯಕ್ತಿಯ ಚಲನವಲನ ಗಮನಿಸಿದ ಕೆಲ ಗ್ರಾಮಸ್ಥರಿಗೆ ಅನುಮಾನ ಮೂಡಿದೆ. ತಕ್ಷಣವೇ ಕೆಲವರು ಹಿಂಬಾಲಿಸಿ ಆರೋಪಿಯನ್ನು ಹಿಡಿದು ಸೆರೆ ಹಿಡಿದಿದ್ದಾರೆ.

ಸ್ಥಳದಲ್ಲಿದ್ದ ಜನರಲ್ಲಿ ಆಕ್ರೋಶ ಜ್ವಾಲೆ ಎದ್ದಿದ್ದು, ಕಳ್ಳತನದ ಘಟನೆಗೆ ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಕಳ್ಳನನ್ನು ಹಿಡಿದ ಕೂಡಲೇ ಕೆಲವರು ಆತನ ಮೇಲೆ ಹಿಗ್ಗಾಮುಗ್ಗವಾಗಿ ಥಳಿಸಿರುವುದಾಗಿ ತಿಳಿದುಬಂದಿದೆ.

ಆಕ್ರೋಶದ ನಡುವೆಯೇ ಆರೋಪಿಯನ್ನು ಅರೆಬೆತ್ತಲೆಗೊಳಿಸಿ ಗ್ರಾಮದಲ್ಲಿ ಮೆರವಣಿಗೆ ನಡೆಸಲಾಗಿದೆ ಎನ್ನಲಾಗಿದೆ. ಬಳಿಕ ಗ್ರಾಮಸ್ಥರು ಆತನನ್ನು ಟ್ರಕ್‌ನಲ್ಲಿ ಸಾಗರ ಗ್ರಾಮಾಂತರ ಪೊಲೀಸ್ ಠಾಣೆಗೆ ಕರೆದುಕೊಂಡು ಹೋಗಿ ಒಪ್ಪಿಸಿದ್ದಾರೆ.

ಪೊಲೀಸರ ಸಮ್ಮುಖದಲ್ಲಿಯೂ ಕೆಲವರು ಆತನಿಗೆ ಹೊಡೆದಿರುವುದಾಗಿ ಹೇಳಲಾಗುತ್ತಿದ್ದು, ಈ ಬಗ್ಗೆ ಸ್ಪಷ್ಟ ಮಾಹಿತಿ ಇನ್ನಷ್ಟೇ ಹೊರಬರಬೇಕಿದೆ.


ಪೊಲೀಸರು ಆರೋಪಿಯನ್ನು ವಶಕ್ಕೆ ಪಡೆದು ಬಂಧಿಸಿದ್ದಾರೆ. ಕಳ್ಳತನ ಪ್ರಕರಣ ದಾಖಲಿಸಿಕೊಂಡು ತನಿಖೆ ಆರಂಭಿಸಿದ್ದಾರೆ. ಕಳ್ಳತನ ನಡೆದ ಮನೆ ಮತ್ತು ಸುತ್ತಮುತ್ತಲಿನ ಪ್ರದೇಶದಲ್ಲಿ ಪರಿಶೀಲನೆ ನಡೆಸಲಾಗಿದೆ.

ಆರೋಪಿಗೆ ಇನ್ನಿತರ ಸಹಚರರಿದ್ದಾರೆಯೇ, ಅಥವಾ ಹಿಂದೆ ಇನ್ನೂ ಕಳ್ಳತನ ಪ್ರಕರಣಗಳಲ್ಲಿ ಭಾಗಿಯಾಗಿದ್ದಾನೆಯೇ ಎಂಬುದರ ಕುರಿತು ಪೊಲೀಸರು ವಿಚಾರಣೆ ನಡೆಸುತ್ತಿದ್ದಾರೆ. ಕದ್ದ ನಗದು ಮತ್ತು ಚಿನ್ನಾಭರಣಗಳ ವಶಪಡಿಸಿಕೊಳ್ಳುವ ಪ್ರಕ್ರಿಯೆಯೂ ನಡೆಯುತ್ತಿದೆ.

ಹಾಡಹಗಲೇ ನಡೆದ ಈ ಘಟನೆ ಗ್ರಾಮದಲ್ಲಿ ಭದ್ರತೆ ಕುರಿತು ಪ್ರಶ್ನೆ ಎಬ್ಬಿಸಿದ್ದು, ಜನರಲ್ಲಿ ಎಚ್ಚರಿಕೆ ಅಗತ್ಯವಿದೆ ಎಂಬ ಮಾತು ಕೇಳಿಬರುತ್ತಿದೆ. ಜೊತೆಗೆ ಕಳ್ಳತನದ ವಿರುದ್ಧ ಜನರ ಆಕ್ರೋಶ ಒಂದೆಡೆ ವ್ಯಕ್ತವಾದರೆ, ಕಾನೂನು ಕೈಗೆತ್ತಿಕೊಳ್ಳುವುದು ಸರಿಯೇ ಎಂಬ ಚರ್ಚೆಯೂ ಗ್ರಾಮದಲ್ಲಿ ಶುರುವಾಗಿದೆ.

ಪೊಲೀಸರು ಪ್ರಕರಣದ ಸಂಪೂರ್ಣ ತನಿಖೆ ನಡೆಸಿ ಮುಂದಿನ ಕಾನೂನು ಕ್ರಮ ಕೈಗೊಳ್ಳಲಿದ್ದಾರೆ.

# ಚರಂಡಿಗೆ ಬಿದ್ದು 5 ವರ್ಷದ ಬಾಲಕ ಸಾವು



**ಬೀದರ್:** ಮನೆಯ ಮುಂದೆ ಆಟವಾಡುತ್ತಿದ್ದ ಪುಟ್ಟ ಬಾಲಕ ಚರಂಡಿ ಕಾಲುವೆಗೆ ಬಿದ್ದು ಸಾವನ್ನಪ್ಪಿದ ದಾರುಣ ಘಟನೆ ಬೀದರ್ ತಾಲೂಕಿನ ಮಲ್ಲಿಕ್‌ಮರ್ಜಾಪುರ ಗ್ರಾಮದಲ್ಲಿ ನಡೆದಿದೆ. ಈ ಘಟನೆ ಗ್ರಾಮಸ್ಥರ ಮನಕಲಕುವಂತಾಗಿದ್ದು, ಕುಟುಂಬದಲ್ಲಿ ಆಕ್ರಂದನ ಮೇಳೈಸಿದೆ.

ಐದು ವರ್ಷದ ಅವಿನಾಶ್ ಈ ದುರ್ಘಟನೆಗೆ ಬಲಿಯಾದ ಬಾಲಕ. ಮನೆಯ ಮುಂದೆಯೇ ಆಟವಾಡುತ್ತಿದ್ದ ಅವಿನಾಶ್, ಗಮನಿಸದ ಕ್ಷಣದಲ್ಲಿ ಸಮೀಪದ ಚರಂಡಿ ಕಾಲುವೆಗೆ ಬಿದ್ದಿದ್ದಾನೆ ಎಂದು ತಿಳಿದುಬಂದಿದೆ. ಕಾಲುವೆಯಲ್ಲಿದ್ದ ನೀರಿನ ಪ್ರವಾಹ ಹಾಗೂ ಆಳದ ಕಾರಣದಿಂದ ಮಗು ಹೊರಬರಲು ಸಾಧ್ಯವಾಗದೆ ದುರಂತ ಸಂಭವಿಸಿದೆ ಎನ್ನಲಾಗಿದೆ.

ಶುಕ್ರವಾರ ಸಂಜೆ ಸುಮಾರು 6 ಗಂಟೆಯ ವೇಳೆ ಅವಿನಾಶ್ ಕಾಣೆಯಾಗಿದ್ದಾನೆ. ಮನೆಮಂದಿ ಹಾಗೂ ಗ್ರಾಮಸ್ಥರು ಬಾಲಕನಿಗಾಗಿ ಆತಂಕದಿಂದ ಹುಡುಕಾಟ ಆರಂಭಿಸಿದ್ದರು. ಸುತ್ತಮುತ್ತಲಿನ ಮನೆಗಳು, ಬೀದಿಗಳು ಹಾಗೂ ಸಂಬಂಧಿಕರ ಮನೆಗಳಲ್ಲಿಯೂ ಹುಡುಕಾಡಿದರೂ ಮಗುವಿನ ಸುಳಿವು ಸಿಕ್ಕಿರಲಿಲ್ಲ.


ಕಾಲಕ್ರಮೇಣ ಆತಂಕ ಹೆಚ್ಚಾಗಿದ್ದು, ನಂತರ ಮನೆಯ ಮುಂದೆ ಹರಿಯುತ್ತಿರುವ ಚರಂಡಿ ಕಾಲುವೆಯನ್ನು ಪರಿಶೀಲಿಸಿದಾಗ ಮಗು ಇುಜಡಿಜಟಿ ಬಿದ್ದಿರುವುದು ಪತ್ತೆಯಾಗಿದೆ. ಆಗಲೇ ಬಾಲಕ ಮೃತಪಟ್ಟಿರುವುದು ತಿಳಿದುಬಂದಿದೆ.

ಪುಟ್ಟ ಮಗುವಿನ ಅಕಾಲಿಕ ಸಾವಿನಿಂದ ಕುಟುಂಬಸ್ಥರು ಶೋಕಸಾಗರದಲ್ಲಿ ಮುಳುಗಿದ್ದಾರೆ. “ಸ್ವಲ್ಪ ಸಮಯದ ಅಜಾಗರೂಕತೆ ಇಂತಹ ದುರಂತಕ್ಕೆ ಕಾರಣವಾಯಿತು” ಎಂದು ಗ್ರಾಮಸ್ಥರು ವಿಷಾದ ವ್ಯಕ್ತಪಡಿಸುತ್ತಿದ್ದಾರೆ. ಮಗುವಿನ ತಾಯಿ-ತಂದೆಯರ ಆಕ್ರಂದನ ಸ್ಥಳೀಯರ ಮನ ಕಲುಕುವಂತಾಗಿದೆ.

ಈ ಘಟನೆ ಬಗದಲ್ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದ್ದು, ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಪ್ರಕರಣ ದಾಖಲಿಸಿಕೊಂಡು ಅಗತ್ಯ ಕ್ರಮ ಕೈಗೊಂಡಿದ್ದಾರೆ.

ಗ್ರಾಮದಲ್ಲಿ ಮುಕ್ತವಾಗಿ ಹರಿಯುತ್ತಿರುವ ಚರಂಡಿ ಕಾಲುವೆಗಳ ಸುರಕ್ಷತೆ ಕುರಿತು ಇದೀಗ ಚರ್ಚೆ ಆರಂಭವಾಗಿದ್ದು, ಇಂತಹ ದುರಂತಗಳು ಮರುಕಳಿಸದಂತೆ ಅಗತ್ಯ ಮುನ್ನೆಚ್ಚರಿಕಾ ಕ್ರಮ ಕೈಗೊಳ್ಳಬೇಕೆಂಬ ಆಗ್ರಹ ಕೇಳಿಬರುತ್ತಿದೆ.

# ನೀರಿನ ಸಮಸ್ಯೆ ಆಗದಂತೆ ಮುನ್ನೆಚ್ಚರಿಕೆ ಸಭೆ: ಕಡ್ಡಾಯವಾಗಿ ಕಾವೇರಿ ಮೀಟರ್ ಅಳವಡಿಸಿಕೊಳ್ಳಿ: ಶಾಸಕ ಎಸ್. ಮುನಿರಾಜು



**ಪೀಣ್ಯ ದಾಸರಹಳ್ಳಿ:** ಬೇಸಿಗೆ ಶುರುವಾಗಲಿದೆ. ಎಲ್ಲೂ ನೀರಿನ ಸಮಸ್ಯೆಯಾಗಬಾರದು ವಾರ್ಡ್ಮಟ್ಟದಲ್ಲಿ ಕಾವೇರಿ ನೀರು ಸಮರ್ಪಕವಾಗಿ ಪೂರೈಕೆ ಆಗುತ್ತಿದೆಯಾ? ಎಂದು ಅಧಿಕಾರಿಗಳೊಂದಿಗೆ ಸಭೆ ನಡೆಸಲಾಯಿತು' ಎಂದು ಶಾಸಕ ಎಸ್. ಮುನಿರಾಜು ತಿಳಿಸಿದರು.

ಎಂಎಐ ಬಡಾವಣೆಯ ಬಿಡಬ್ಲ್ಯೂಎಸ್‌ಎಸ್‌ಬಿ ಕಚೇರಿಯಲ್ಲಿ ಸಭೆ ನಡೆಸಿ ಮಾತನಾಡಿದರು.

ಕೆಲವೊಂದು ಪ್ರದೇಶಗಳಲ್ಲಿ ನೀರು ಸಮರ್ಪಕವಾಗಿ ಪೂರೈಕೆಯಾಗುತ್ತಿರಲಿಲ್ಲ ಎಂಬ ದೂರು ಬಂದಿತ್ತು. ವಾಟರ್ ಮ್ಯಾನ್ ಗಳು ನಿರ್ಮಾಣ ಹಂತದ ಕಟ್ಟಡಗಳಿಗೆ ಮತ್ತು ಬೇಕಾದಂತವರಿಗೆ ನೀರು ಪೂರೈಕೆ ಮಾಡುತ್ತಿರುವ ಹಿನ್ನೆಲೆ ಅಂತಹ ಅನುಮತಿ ಇಲ್ಲದ, ಕಾವೇರಿ ಮೀಟರ್ ಹಾಕಿಸಿಕೊಳ್ಳದಂತಹ ಕಾನೂನು ಬಾಹಿರ ನೀರು ಪೂರೈಕೆಗೆ ಕಡಿವಾಣ ಹಾಕಲು ಅಧಿಕಾರಿಗಳಿಗೆ ಸೂಚಿಸಲಾಗಿದೆ' ಎಂದರು.

ಕಾವೇರಿ ನೀರನ್ನು ವಾರಕ್ಕೆ ಮೂರು ದಿನಗಳಂತೆ ಸಮರ್ಪಕವಾಗಿ ಪೂರೈಕೆ ಮಾಡಬೇಕು. ಹಾಗೆಯೇ ಇನ್ನು ಕೆಲವು ಮನೆಯವರು ಕಾವೇರಿ ನೀರಿನ ಮೀಟರನ್ನು ಹಾಕಿಸಿಕೊಂಡಿಲ್ಲದವರು ಕಡ್ಡಾಯವಾಗಿ ಹಾಕಿಸಿಕೊಳ್ಳಬೇಕು' ಎಂದು ತಿಳಿಸಿದರು.

ಕ್ಷೇತ್ರದಲ್ಲಿ ಎಷ್ಟು ಬೋರ್‌ವೆಲ್‌ಗಳು ಕೆಲಸ ಮಾಡುತ್ತಿವೆ? ಎಷ್ಟು ಬತ್ತಿ ಹೋಗಿದೆ? ಕೆಲವೊಂದು ರಿಪೇರಿ ಮಾಡಿಸಲು ಸಾಧ್ಯನಾ ಎಂಬ ಮಾಹಿತಿ ಪಡೆಯಲಾಯಿತು. ಕೆಲವೊಂದು ವಾಟರ್ ಮ್ಯಾನ್ ಗಳು ಮದ್ಯಪಾನ ಮಾಡಿ ಸರಿಯಾಗಿ ನೀರು ಪೂರೈಕೆ ಮಾಡುತ್ತಿಲ್ಲ ಎಂಬ ದೂರುಗಳಿವೆ ಅಂತಹವರ ಮೇಲೆ ಮತ್ತು ನಿರ್ಮಾಣ ಹಂತದ ಕಟ್ಟಡಗಳ ಮೇಲೆ ನಿಗಾವಹಿಸಬೇಕು' ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಅನುಮತಿ ಇಲ್ಲದೆ ರಸ್ತೆ ಅಗೆಯುವವರು ಕಡ್ಡಾಯವಾಗಿ ಜಿಬಿಎ ಇಂದ ಅನುಮತಿ ಪಡೆಯಬೇಕು. ಜಿಕೆ ಡಬ್ಲ್ಯೂ ಲೇಔಟ್, ರವೀಂದ್ರ ನಗರ, ಅಬ್ಬಿಗೆರೆ ಮತ್ತು ಹೆಗ್ಗನಹಳ್ಳಿ ಭಾಗಗಳಲ್ಲಿ ನೀರಿನ ಸಮಸ್ಯೆಯನ್ನು ಬಗೆಹರಿಸಲಾಯಿತು' ಎಂದರು.

ಸಭೆಯಲ್ಲಿ ಬಿಡಬ್ಲ್ಯೂಎಸ್‌ಎಸ್‌ಬಿ ಅಪರ ಮುಖ್ಯ ಎಂಜಿನಿಯರ್ ದೇವರಾಜು, ಕಾರ್ಯಪಾಲಕ ಎಂಜಿನಿಯರ್ ಹರಿನಾಥ್,ಎಇಇ ನಾಗರಾಜು, ಮಂಜುನಾಥ್ ಮತ್ತು ಬೋರ್ ವೆಲ್ ವಿಭಾಗದ ಎಇಇ ಆಶಾ, ಎಇ ಕಾರ್ತಿಕ್ ಮತ್ತು ಇನ್ಸ್ಪೆಕ್ಟರ್ಗಳು ಭಾಗವಹಿಸಿದ್ದರು.

# ಮನುಷ್ಯ ಜನ್ಮ ಯೋಗಕ್ಕೆ,ಭೋಗಕ್ಕಲ್ಲ ಶ್ರೀ ಡಾ. ನಿರ್ಮಲಾನಂದನಾಥ ಮಹಾ ಸ್ವಾಮೀಜಿ



**ಯಶವಂತಪುರ:** ನಾಡಿನ ಸನಾತನ ಪರಂಪರೆಯ ಹಬ್ಬ ಹರಿದಿನಗಳು ಮನುಷ್ಯನ, ಮಾತು, ಮನಸ್ಸು, ಬುದ್ಧಿಯನ್ನು ಶುದ್ಧಗೊಳಿಸಿ ಸಾತ್ವಿಕತೆ ಮೂಡಿಸುತ್ತವೆ ಎಂದು ಶ್ರೀ ಆದಿಚುಂಚನಗಿರಿ ಮಹಾ ಸಂಸ್ಥಾನ ಮಠದ ಪೀಠಾಧ್ಯಕ್ಷರಾದ ಶ್ರೀ ಡಾ. ನಿರ್ಮಲಾನಂದನಾಥ ಮಹಾಸ್ವಾಮೀಜಿ ತಿಳಿಸಿದರು

ಮಹಾಶಿವರಾತ್ರಿ ಪ್ರಯುಕ್ತ ಕ್ಷೇತ್ರದ ಕೆಂಗೇರಿಯ ವಿಶ್ವ ಒಕ್ಕಲಿಗರ ಮಹಾಸಂಸ್ಥಾನ ಮಠ ಹಾಗೂ ಒಕ್ಕಲಿಗ ಯುವ ಬ್ರಿಗೇಡ್ ಆಶ್ರಯದಲ್ಲಿ ಪೀಠಾಧ್ಯಕ್ಷರಾದ ಶ್ರೀ ಡಾ. ನಿಶ್ಚಲಾನಂದನಾಥ ಮಹಾಸ್ವಾಮೀಜಿ

ಅವರ ದಿವ್ಯ ಸಾನಿಧ್ಯದಲ್ಲಿಶ್ರೀಮಠದ ಆವರಣದಲ್ಲಿ ಆಯೋಜಿಸಿದ್ದ ಶ್ರೀ ಕುಮಾರ ಚಂದ್ರಶೇಖರನಾಥ ಮಹಾ ಸ್ವಾಮೀಜಿ ಅವರ ಅಭಿನಂದನಾ ಗ್ರಂಥ ಲೋಕಾರ್ಪಣೆ, ಸಾವಯವ ಸಂತೆ, ವಿಜ್ಞಾನ ಮತ್ತು ತಂತ್ರಜ್ಞಾನ ವಸ್ತುಪ್ರದರ್ಶನ, ಉಚಿತ ಆರೋಗ್ಯ ಶಿಬಿರ ಸರ್ವಜನಾಂಗದ ವಧು-ವರರ ಮುಖಾ-ಮುಖಿ ಜತೆಗೆ ಮಲೆನಾಡು ಗಿಡ್ಡ ರಾಸುಗಳ ಉಚಿತ ವಿತರಣಾ ಕಾರ್ಯಕ್ರಮವನ್ನು ಉದ್ಘಾಟಿಸಿ ಆಶೀರ್ವಚನ ನೀಡಿದರು.

ಮನುಷ್ಯ ಜನ್ಮ ಭೋಗಕ್ಕಲ್ಲ ಯೋಗಕ್ಕೆಂಬ ಸತ್ಯ ಅರಿತು ಜನತೆ ಬೌದ್ಧಿಕ ಪ್ರಜ್ಞೆ ಬೆಳೆಸಿಕೊಂಡು ಸಮಾಜಮುಖಿ ಕಾರ್ಯಗಳಲ್ಲಿ ತೊಡಗಿಸಿಕೊಳ್ಳಿ ಎಂದು ಸಲಹೆ ನೀಡಿದರು.

ಕೃಷಿ ಸಚಿವಎನ್. ಚಲುವರಾಯಸ್ವಾಮಿ ಮಾತನಾಡಿ ದೇಶ ಹಾಗೂ ನಾಡಿನ ಶ್ರೇಯೋಭಿವೃದ್ಧಿಗೆ ಮಠಮಾನ್ಯಗಳ ಕೊಡುಗೆ ಅಪಾರ. ಧಾರ್ಮಿಕ, ಶೈಕ್ಷಣಿಕ, ಆರೋಗ್ಯ ಕ್ಷೇತ್ರಗಳಲ್ಲಿ ಮಠಗಳ ಪಾತ್ರ ಹಿರಿದಾಗಿದೆ. ಜತೆಗೆ ಸಾರ್ವಜನಿಕರಿಗೆ ಸೇವೆ, ಸೌಲಭ್ಯ ಕಲ್ಪಿಸುವಲ್ಲಿಯೂ ಮಠಗಳು ಮುಂಚೂಣಿಯಲ್ಲಿವೆ ಎಂದರು.

ವಿಶ್ವ ಒಕ್ಕಲಿಗರ ಮಹಾ ಸಂಸ್ಥಾನ ಮಠದ ಪೀಠಾಧ್ಯ ಕ್ಷರಾದ ಶ್ರೀ ಡಾ. ನಿಶ್ಚಲಾನಂದನಾಥ ಮಹಾ ಸ್ವಾಮೀಜಿ ಮಾತನಾಡಿ ಸದೃಢ, ಸ್ವಸ್ಥ ಸಮಾಜ ನಿರ್ಮಾಣ ನಿಟ್ಟಿನಲ್ಲಿ ರೈತರು ಹಾಗೂ ಸಾರ್ವಜನಿಕರಿಗೆ ವೈಚಾರಿಕ ಪ್ರಜ್ಞೆ ಮೂಡಿಸಿ ರಾಸಾಯನಿಕ ರಹಿತ ಆಹಾರ ಧಾನ್ಯಗಳ ಬಳಕೆಯನ್ನು ಉತ್ತೇಜಿಸುವ ಸಲುವಾಗಿ ಸಾವಯವ ಸಂತೆ ಏರ್ಪಡಿಸಲಾಗಿದೆ. ವಿಜ್ಞಾನ ತಂತ್ರಜ್ಞಾನ ವಸ್ತು ಪ್ರದರ್ಶನ

ಹಾಗೂ ಹೈನುಗಾರಿಕೆ ಪ್ರೋತ್ಸಾಹಿಸಲು ಗಿಡ್ಡ ರಾಸುಗಳನ್ನು ರೈತರಿಗೆ ನೀಡಲಾಯಿತು ಎಂದರು

ಸಮುದಾಯ, ಸಮಾಜಕ್ಕೆ ಫಲ ಸಿಗುವಂತೆ ಶ್ರೀಮಠವನ್ನು ಮುನ್ನಡೆಸುವ ಗುರುತರ ಜವಾಬ್ದಾರಿ ನಮ್ಮ ಮೇಲಿದೆ ಪೂಜ್ಯ ಶ್ರೀಗಳು, ಶ್ರೀಮಠದ ಭಕ್ತರ, ನಂಬಿಕೆ ವಿಶ್ವಾಸಕ್ಕೆ ಚ್ಯುತಿ ತರದಂತೆ ಕಾರ್ಯನಿವ ೯ಹಿಸುವುದಾಗಿ ಇದೇ ವೇಳೆ ಭರವಸೆ ನೀಡಿದರು.

ಪಟ್ಟನಾಯಕನಹಳ್ಳಿಯ ಶ್ರೀ ಸ್ಫಟಿಕಪುರಿ ಮಹಾ ಸಂಸ್ಥಾನ ಮಠದ ಶ್ರೀ ನಂಜಾವಧೂತ ಮಹಾ ಸ್ವಾಮೀಜಿ, ಬೆಂಗಳೂರಿನ ಶ್ರೀ ಕೈಲಾಸಾಶ್ರಮ ಮಹಾ ಸಂಸ್ಥಾನದ ಶ್ರೀ ಜಯೇಂದ್ರಪುರಿ ಮಹಾ ಸ್ವಾಮೀಜಿ, ಶ್ರೀರಂಗಪಟ್ಟಣದ ಶ್ರೀ ಚಂದ್ರವನ ಆಶ್ರಮದ ಅಧ್ಯಕ್ಷ ಶ್ರೀ ಡಾ. ತ್ರಿನೇತ್ರ ಮಹಾಂತ ಶಿವಯೋಗಿ ಸ್ವಾಮೀಜಿ, ಮಲೆಮಹದೇಶ್ವರ ಬೆಟ್ಟದ ಸಾಲೂರು ಮಠದ ಶ್ರೀ ಶಾಂತ ಮಲ್ಲಿಕಾರ್ಜುನ ಸ್ವಾಮೀಜಿ, ಮಾಜಿ ಮುಖ್ಯಮಂತ್ರಿ ಡಿ.ವಿ ಸದಾನಂದ ಗೌಡ ಶಾಸಕ ಎಸ್.ಟಿ. ಸೋಮಶೇಖರ್, ಡಿಸಿ ಕುಮಾರ್, ಪದ್ಮಶ್ರೀ ಪ್ರಶಸ್ತಿ ಪುರಸ್ಕೃತ ಅಂಕೇಗೌಡ ಮೊದಲಾದವರಿದ್ದರು.

ಕೆಂಗೇರಿಯ ವಿಶ್ವ ಒಕ್ಕಲಿಗರ ಮಠದ ಆವರಣದಲ್ಲಿ ಆಯೋಜಿಸಿದ್ದ ಶ್ರೀ ಕುಮಾರ ಚಂದ್ರಶೇಖರನಾಥ ಮಹಾ ಸ್ವಾಮೀಜಿ ಅವರ ಅಭಿನಂದನಾ ಗ್ರಂಥ ಲೋಕಾರ್ಪಣೆ ಇತರೆ ಕಾರ್ಯಕ್ರಮಗಳನ್ನು ಶ್ರೀ ಡಾ. ನಿರ್ಮಲಾನಂದನಾಥ

ಮಹಾ ಸ್ವಾಮೀಜಿ ಉದ್ಘಾಟಿಸಿದರು. ಶ್ರೀ ಡಾ. ನಿಶ್ಚಲಾನಂದನಾಥ ಮಹಾ ಸ್ವಾಮೀಜಿ, ಶ್ರೀ ನಂಜಾವಧೂತ ಮಹಾ ಸ್ವಾಮೀಜಿ, ಸಚಿವ ಚಲುವರಾಯಸ್ವಾಮಿ, ಶಾಸಕ ಎಸ್.ಟಿ ಸೋಮಶೇಖರ್ ಇತರರು ಇದ್ದರು

# “ಸೈನ್ಸ್ ಫೆಸ್ಟ್ ಇನೋವೇಟಿವ್ ಅರೇನ”ಕಿಡ್ಸ್ ಕಾರ್ನಿವಲ್ ವಿಜ್ಞಾನ ಮೇಳವನ್ನು ಉದ್ಘಾಟಿಸಿದ ಶಾಸಕ ಧೀರಜ್ ಮುನಿರಾಜ್



**ದೊಡ್ಡಬಳ್ಳಾಪುರ:** ತಾಲೂಕಿನ ಕರೆನಹಳ್ಳಿಯಲ್ಲಿರುವ ನ್ಯಾಷನಲ್ ಪ್ರೈಡ್ ಶಾಲೆಯಲ್ಲಿಂದು “ಸೈನ್ಸ್ ಫೆಸ್ಟ್‌ಇನೋವೇಟಿವ್ ಅರೇನ” (ವಿಜ್ಞಾನ ಮೇಳ) ವನ್ನು ಆಯೋಜಿಸಲಾಗಿತ್ತು. ಈ ವಿಜ್ಞಾನ ಮೇಳವನ್ನು ಶಾಸಕ ಧೀರಜ್ ಮುನಿರಾಜು ಉದ್ಘಾಟಿಸಿದರು.

ಈ ಕಾರ್ಯಕ್ರಮದಲ್ಲಿ ಪ್ರಮುಖ ಆಕರ್ಷಣೆ ಆಗಿ ಫನ್ ವಿಥ್ ಸೈನ್ಸ್ ಅಂಡ್ ಮ್ಯಾಥ್ಸ್ , ಆರ್ಟ್ ಗ್ಯಾಲರಿ, ಹ್ಯಾಲೋವಿನ್, ಮಾಥ್ಸ್ ಕಾರ್ನರ್, ಸೈನ್ಸ್ ಕಾರ್ನರ್, ಎಮ್ರಿಯೋ ಡೆವಲಪ್ಮೆಂಟ್ ಥೀಮ್, ಕಿಡ್ಸ್ ಕಾರ್ನಿವಲ್, ಇನ್ನು ಮುಂತಾದವು ಎಲ್ಲರ ಗಮನವನ್ನು ಸೆಳೆಯಿತು.

ಶಾಲೆಯಲ್ಲಿರುವ ಪ್ರತಿಯೊಂದು ವಿದ್ಯಾರ್ಥಿಯು ವಿವಿಧ ರೀತಿಯ ವಿಜ್ಞಾನ, ಗಣಿತ, ಕಲೆಗೆ ಸಂಬಂಧಿಸಿದ ಮಾದರಿಗಳನ್ನು ತಯಾರಿಸಿ ಅವುಗಳನ್ನು ಪ್ರಸ್ತುತಪಡಿಸಿದರು.

ಫನ್ ವಿಥ್ ಸೈನ್ಸ್ ಎಂಬ ಚಟುವಟಿಕೆಯ ಮೂಲಕ ವಿಜ್ಞಾನ ಮತ್ತು ಗಣಿತಕ್ಕೆ ಸಂಬಂಧಿಸಿದ ಆಟಗಳು, ತಂತ್ರಗಳು ಹಾಗೂ ನೈಜ ಜೀವನದ ಪ್ರಾಯೋಗಿಕತೆಯ ಬಗ್ಗೆ ವಿದ್ಯಾರ್ಥಿಗಳಲ್ಲಿ ಮತ್ತು ಪೋಷಕರಲ್ಲಿ ಅರಿವನ್ನ ಮೂಡಿಸಿತು.

ಫನ್ ವಿತ್ ಸೈನ್ಸ್ ಅಂಡ್ ಮ್ಯಾಚ್ ನ ಮೂಲಕ ಜನ್ಮ ದಿನಾಂಕವನ್ನು ತಿಳಿಯುವುದು. ಮ್ಯಾಜಿಕ್ ಸಂಖ್ಯೆಗಳ ಮೂಲಕ ಮೊಬೈಲ್ ನಂಬರ್ ತಿಳಿಯುವುದು. ಮನಸ್ಸಿನಲ್ಲಿರುವ ಸಂಖ್ಯೆಯನ್ನು ತಿಳಿಸಿದರೆ ಮಾನಸಿಕ ತಂತ್ರಗಳ ಬಳಕೆಯ ಬಗ್ಗೆ ತಿಳಿಸಿಕೊಡಲಾಯಿತು.

ಎಂಬ್ರಿಯೋ ಡೆವಲಪ್ಮೆಂಟ್ ಎಂಬ ಆಕರ್ಷಕ ಪ್ರದರ್ಶನದ ಮೂಲಕ ತಾಯಿಯ ಗರ್ಭದಲ್ಲಿ ಮಗುವು ಹೇಗೆ ವಿವಿಧ ಹಂತಗಳಲ್ಲಿ ಬೆಳವಣಿಗೆ ಆಗುತ್ತದೆ ಎಂಬುದನ್ನು ಮನಮುಟ್ಟುವಂತೆ ತೋರಿಸಲಾಯಿತು. ಇದರಿಂದ ವಿದ್ಯಾರ್ಥಿಗಳಿಗೆ ಮತ್ತು ಪೋಷಕರಿಗೆ ತಾಯಿಯ, ತಾಯ್ತನದ ಮಹತ್ವದ ಬಗ್ಗೆ ಅರಿವು ಮೂಡಿತು.

ಹ್ಯಾಲೋವಿನ್ ರೂಮ್ ನ ಮೂಲಕ ನೆಗೆಟಿವ್ ವೈಬ್ಸ್ ಅಂದರೆ ಏನು? ಹೇಗಿರುತ್ತದೆ, ಮಕ್ಕಳೆಲ್ಲ ಹೇಗೆ ಭಯ ಬೀಳುತ್ತಾರೆ, ಅದನ್ನು ಸಾಮಾನ್ಯವಾಗಿ ಹೇಗೆ ವೀಕ್ಷಿಸುವುದು, ಭಯವನ್ನು ಹೇಗೆ ಹೋಗಲಾಡಿಸುವುದು ಎಂಬುದನ್ನು ವಿವಿಧ ರೀತಿಯ ಗೊಂಬೆಗಳನ್ನು ಅಲಂಕಾರ ಮಾಡಿ ಪ್ರಸ್ತುತಪಡಿಸಲಾಯಿತು.

ಸೈನ್ಸ್ ಫೆಸ್ಟ್ ನಂತರ ಮಧ್ಯಾಹ್ನ 2 ರಿಂದ 5:00 ವರೆಗೆ ಕಿಡ್ಸ್ ಕಾರ್ನಿವಲ್ ಚಟುವಟಿಕೆಯನ್ನು ಮಕ್ಕಳ ಮನರಂಜನೆ ಪ್ರಯುಕ್ತ ಆಯೋಜಿಸಲಾಗಿತ್ತು. ಇದರಲ್ಲಿ ಮಕ್ಕಳಿಗೆ ಅರ್ಚರಿ, ಬ್ಯಾಸ್ಕೆಟ್ಬಾಲ್, ನೆಟ್ ಬ್ಯಾಲೆನ್ಸಿಂಗ್, ವಿವಿಧ ಸಾಕುಪ್ರಾಣಿಗಳ ಪ್ರದರ್ಶನ, ಟ್ಯಾಟು ಹಾಕುವುದು, ಇನ್ನು ಮುಂತಾದ ಹಲವಾರು ಕ್ರೀಡಾ ಚಟುವಟಿಕೆಗಳ ಮೂಲಕ ವಿದ್ಯಾರ್ಥಿಗಳಿಗೆ ಮತ್ತು ಪೋಷಕರಿಗೆ ಮನರಂಜನೆ ಮತ್ತು ಉತ್ತಮ ಅನುಭವವನ್ನು ನೀಡಲಾಯಿತು.

ಈ ಕಾರ್ಯಕ್ರಮದ ಮೂಲಕ ವಿದ್ಯಾರ್ಥಿಗಳಲ್ಲಿ ವೈಜ್ಞಾನಿಕ ಜ್ಞಾನ, ಪ್ರಾಯೋಗಿಕತೆ, ಚಟುವಟಿಕೆಯನ್ನು ಹೇಗೆ ಸಿದ್ಧಪಡಿಸುವುದು, ಅದನ್ನು ಹೇಗೆ ಪ್ರಸ್ತುತಪಡಿಸುವುದು ಎಂಬುದರ ಬಗ್ಗೆ ತಿಳಿದುಕೊಂಡರು. ಎಲ್ಲರೂ ಆಸಕ್ತಿ ಮತ್ತು ಉತ್ಸಾಹದಿಂದ ಪಾಲ್ಗೊಂಡಿದ್ದರು.

ಎಲ್ಲಾ ಪೋಷಕರು ಸಹ ಕಾರ್ಯಕ್ರಮವನ್ನು ವೀಕ್ಷಿಸಿ ಈ ಕಾರ್ಯಕ್ರಮವು ತುಂಬಾ ಅದ್ಭುತವಾಗಿ ಮೂಡಿ ಬಂದಿದ್ದು, ನಮ್ಮ ಮಕ್ಕಳನ್ನು ಸಿದ್ಧಪಡಿಸಿರುವುದು ನಮಗೆ ತುಂಬಾ ಖುಷಿಯಾಗಿದೆ. ಇದು ನಮಗೆ ನಮ್ಮ ಮಕ್ಕಳಿಗೆ ಒಂದು ಉತ್ತಮ ಅವಕಾಶವಾಗಿದ್ದು ವೈಜ್ಞಾನಿಕ ಜ್ಞಾನ ಮತ್ತು ಅರಿವನ್ನ ನೀಡಿತು. ಈ ಶಾಲೆಯ ಮೂಲಕ ನಮ್ಮ ಮಕ್ಕಳಿಗೆ ಉತ್ತಮ ಜ್ಞಾನ ದೊರೆಯುತ್ತಿದೆ ಎಂದು ಎಲ್ಲರೂ ಉತ್ತಮ ಪ್ರಶಂಸೆ ನೀಡಿದರು.

ಈ ಕಾರ್ಯಕ್ರಮದಲ್ಲಿ ನ್ಯಾಷನಲ್ ಪ್ರೈಡ್ ಶಾಲೆಯ ಸಂಸ್ಥಾಪಕ ಸಿ ಎನ್ ನಾಗರಾಜುರವರು, ಕಾರ್ಯದರ್ಶಿಯಾದ ಸತೀಶ್ ರಾಜ್, ಮುಖ್ಯ ಶಿಕ್ಷಕಿಂಯಾದ ರಶ್ಮಿ, ಹಾಗೂ ಶಾಲೆಯ ಸಿಬ್ಬಂದಿ, ವಿದ್ಯಾರ್ಥಿಗಳು, ಎಲ್ಲಾ ಪೋಷಕರು ಪಾಲ್ಗೊಂಡಿದ್ದರು.

# ನಿರ್ಮಾಣ ಹಂತದ ಮೆಟ್ರೋ ಪಿಲ್ಲರ್ ಕುಸಿತ: ನಾಲ್ವರಿಗೆ ಗಂಭೀರ ಗಾಯ



**ಮುಂಬೈ:**ಮಹಾರಾಷ್ಟ್ರದ ರಾಜಧಾನಿ ಮುಂಬೈನಲ್ಲಿ ನಿರ್ಮಾಣ ಹಂತದಲ್ಲಿದ್ದ ಮೆಟ್ರೋ ಪಿಲ್ಲರ್ ಏಕಾಏಕಿ ಕುಸಿದು ರಸ್ತೆ ಮೇಲೆ ಸಂಚರಿಸುತ್ತಿದ್ದ ಹಲವು ವಾಹನಗಳ ಮೇಲೆ ಬಿದ್ದ ಭೀಕರ ಅವಘಡ ಪಶ್ಚಿಮ ಮುಲುಂದ್ ಪ್ರದೇಶದಲ್ಲಿ ಸಂಭವಿಸಿದೆ. ಎಲ್‌ಬಿಎಸ್ ರಸ್ತೆಯ ಜಾನ್ಸನ್ ಅಂಡ್ ಜಾನ್ಸನ್ ಕಂಪನಿ ಸಮೀಪ ಈ ದುರ್ಘಟನೆ ನಡೆದಿದ್ದು, ಮಧ್ಯಾಹ್ನದ ಗರಿಷ್ಠ ಸಂಚಾರದ ವೇಳೆಯಲ್ಲೇ ಘಟನೆ ಸಂಭವಿಸಿರುವುದು ಆತಂಕ ಹೆಚ್ಚಿಸಿದೆ.

**ಸಂಚಾರದ ನಡುವೆ ಸಂಭವಿಸಿದ ದುರಂತ:** ಮಧ್ಯಾಹ್ನ ವೇಳೆಯಲ್ಲಿ ಎಲ್‌ಬಿಎಸ್ ರಸ್ತೆಯಲ್ಲಿ ವಾಹನ ಸಂಚಾರ ಗರಿಷ್ಠ ಮಟ್ಟದಲ್ಲಿ ದ್ದಾಗಲೇ ನಿರ್ಮಾಣ ಕಾಮಗಾರಿ ನಡೆಯುತ್ತಿದ್ದ ಮೆಟ್ರೋ ಪಿಲ್ಲರ್‌ನ ಸ್ಲ್ಯಾಬ್ ಭಾಗ ಏಕಾಏಕಿ ಕುಸಿದುಬಿದ್ದಿದೆ. ಪಿಲ್ಲರ್‌ನ ಮೇಲ್ಭಾಗದ ಭಾರೀ ಕಾಂಕ್ರೀಟ್ ಸ್ಲ್ಯಾಬ್ ರಸ್ತೆ ಮೇಲೆ ಸಾಗುತ್ತಿದ್ದ ಆಟೋ, ಕಾರು ಹಾಗೂ ದ್ವಿಚಕ್ರ ವಾಹನಗಳ ಮೇಲೆ ಬಿದ್ದ ಪರಿಣಾಮ ವಾಹನಗಳು ಜಖಂಗೊಂಡಿವೆ.

ಘಟನೆಯ ತೀವ್ರತೆಯಿಂದಾಗಿ ರಸ್ತೆಯಲ್ಲಿ ಸಂಚರಿಸುತ್ತಿದ್ದವರು ಪ್ರಾಣಭೀತಿಯಿಂದ ಓಡಿಹೋಗಿದ್ದಾರೆ. ಕ್ಷಣಾರ್ಧದಲ್ಲಿ ಸ್ಥಳದಲ್ಲಿ ಗೊಂದಲದ ವಾತಾವರಣ ನಿರ್ಮಾಣವಾಗಿದೆ.

ಪ್ರಾಥಮಿಕ ಮಾಹಿತಿಯ ಪ್ರಕಾರ ಕನಿಷ್ಠ ನಾಲ್ವರು ಗಂಭೀರವಾಗಿ ಗಾಯಗೊಂಡಿದ್ದಾರೆ. ಕೆಲವರು ವಾಹನಗಳೊಳಗೆ ಸಿಲುಕಿ ಕೊಂಡಿದ್ದು, ಸ್ಥಳೀಯರು ತಕ್ಷಣ ರಕ್ಷಣಾ ಕಾರ್ಯಕ್ಕೆ ಮುಂದಾಗಿದ್ದಾರೆ. ವಿಶೇಷವಾಗಿ ಆಟೋದಲ್ಲಿ ಸಿಲುಕಿಕೊಂ ಡಿದ್ದವರನ್ನು ಹೊರತೆಗೆದಲು ಜನರು ಹರಸಾಹಸಪಟ್ಟಿದ್ದಾರೆ.

ಗಾಯಾಳುಗಳನ್ನು ಸಮೀಪದ ಆಸ್ಪತ್ರೆಗೆ ದಾಖಲಿಸಲಾಗಿದ್ದು, ಕೆಲವರ ಸ್ಥಿತಿ ಗಂಭೀರವಾಗಿದೆ ಎಂದು ಮೂಲಗಳು ತಿಳಿಸಿವೆ.

ಘಟನೆಯ ಮಾಹಿತಿ ದೊರಕುತಿದ್ದಂತೆಯೇ ಪೊಲೀಸರು ಹಾಗೂ ಅಗ್ನಿಶಾಮಕ ದಳದ ಸಿಬ್ಬಂದಿ ಸ್ಥಳಕ್ಕೆ ದೌಡಾಯಿಸಿದ್ದಾರೆ. ರಕ್ಷಣಾ ಕಾರ್ಯಾಚರಣೆ ತಕ್ಷಣ ಆರಂಭಗೊಂಡಿದ್ದು, ಸಿಲುಕಿಕೊಂಡವರನ್ನು ಸುರಕ್ಷಿತವಾಗಿ ಹೊರತೆಗೆದು ಆಸ್ಪತ್ರೆಗೆ ಸಾಗಿಸಲಾಗಿದೆ.

ಪಿಲ್ಲರ್ ಕುಸಿತದಿಂದಾಗಿ ಎಲ್‌ಬಿಎಸ್ ರಸ್ತೆಯಲ್ಲಿ ಕೆಲಕಾಲ ಭಾರೀ ಟ್ರಾಫಿಕ್ ಜಾಮ್ ಉಂಟಾಗಿದೆ. ಸ್ಥಳವನ್ನು ಪೊಲೀಸರು ಬಂದೋಬಸ್ತ್ ಮಾಡಿ ಸಂಚಾರವನ್ನು ಬೇರೆ ಮಾರ್ಗಗಳಿಗೆ ತಿರುಗಿಸಿದ್ದಾರೆ.

ನಿರ್ಮಾಣ ಹಂತದಲ್ಲಿದ್ದ ಮೆಟ್ರೋ ಪಿಲ್ಲರ್ ಏಕೆ ಕುಸಿತವಾಯಿತು ಎಂಬುದರ ಕುರಿತು ಪ್ರಾಥಮಿಕ ತನಿಖೆ ಆರಂಭವಾಗಿದೆ. ಕಾಮಗಾರಿಯಲ್ಲಿ ತಾಂತ್ರಿಕ ದೋಷವಿದೆಯೇ, ಅಥವಾ ಸುರಕ್ಷತಾ ಕ್ರಮಗಳಲ್ಲಿ ನಿರ್ಲಕ್ಷ್ಯವಿದೆಯೇ ಎಂಬುದನ್ನು ಪರಿಶೀಲಿಸಲಾಗುತ್ತಿದೆ.

ಈ ಘಟನೆ ನಿರ್ಮಾಣ ಕಾಮಗಾರಿಗಳ ಸುರಕ್ಷತಾ ಮಾನದಂಡಗಳ ಬಗ್ಗೆ ಗಂಭೀರ ಪ್ರಶ್ನೆ ಎಬ್ಬಿಸಿದ್ದು, ಸ್ಥಳೀಯರು ಕಟ್ಟಡ ನಿರ್ಮಾಣ ಸ್ಥಳಗಳಲ್ಲಿ ಕಟ್ಟುನಿಟ್ಟಿನ ಮೇಲ್ವಿಚಾರಣೆ ಅಗತ್ಯವಿದೆ ಎಂದು ಆಗ್ರಹಿಸಿದ್ದಾರೆ.

# ಕುಡಿದು ಪೊಲೀಸಪ್ಪನ ಅವಾಂತರಕ್ಕೆ 24ರ ಯುವತಿ ದುರಂತ ಸಾವು



**ಹರ್ಯಾಣ:** ಅಂಬಾಲಾದಲ್ಲಿ ಕುಡಿದ ಮತ್ತಿನಲ್ಲಿ ವಾಹನ ಚಲಾಯಿಸಿದ ಪೊಲೀಸ್ ಅಧಿಕಾರಿಯ ಉದ್ಧಟತನಕ್ಕೆ 24 ವರ್ಷದ ಯುವತಿ ನಿಕಿತಾ ಬಲಿಯಾಗಿದ್ದಾಳೆ. ಕೆಲಸ ಮುಗಿಸಿ ಮನೆಗೆ ಮರಳುತ್ತಿದ್ದ ಯುವತಿ ಈ ದುರಂತ ಘಟನೆಯಲ್ಲಿ ಸ್ಥಳದಲ್ಲೇ ಮೃತಪಟ್ಟಿದ್ದಾಳೆ. ಘಟನೆಯ ನಂತರ ಸ್ಥಳೀಯರು ಪೊಲೀಸ್ ಅಧಿಕಾರಿಯನ್ನು ಹಿಡಿದು ಪೊಲೀಸರಿಗೆ ಒಪ್ಪಿಸಿದ್ದಾರೆ.

ಗುರುಗ್ರಾಮ್‌ನಲ್ಲಿ ಉದ್ಯೋಗದಲ್ಲಿದ್ದ ನಿಕಿತಾ, ಕೆಲಸ ಮುಗಿಸಿಕೊಂಡು ಅಂಬಾಲಾಕ್ಕೆ ಮರಳಿದ್ದಳು. ಅಲ್ಲಿಂದ ತನ್ನ ಊರಿಗೆ ತೆರಳಲು ಈ-ರಿಕ್ಷಾ ಹತ್ತಿದ್ದಳು. ಈ-ರಿಕ್ಷಾದಲ್ಲಿ ನಾಲ್ವರು ಪ್ರಯಾಣಿಕರಿದ್ದು, ನಿಕಿತಾ ಬದಿಯಲ್ಲಿ ಕುಳಿತಿದ್ದಳು. ಇದೇ ವೇಳೆ ಕುಡಿದ ಮತ್ತಿನಲ್ಲಿ ವೇಗವಾಗಿ ಕಾರು ಚಲಾಯಿಸುತ್ತಿದ್ದ ಪೊಲೀಸ್ ಅಧಿಕಾರಿ ಈ-ರಿಕ್ಷಾಗೆ ಡಿಕ್ಕಿ ಹೊಡೆದನು. ಭಾರೀ ರಭಸದಿಂದ ನಿಕಿತಾ ರಸ್ತೆಗೆ ಬಿದ್ದಳು. ಆದರೆ ಆರೋಪಿತ ಪೊಲೀಸ್ ಅಧಿಕಾರಿ ವಾಹನವನ್ನು ನಿಲ್ಲಿಸದೇ ಮುಂದಕ್ಕೆ ಚಲಿಸಿ, ರಸ್ತೆಗೆ ಬಿದ್ದಿದ್ದ ಯುವತಿಯ ಮೇಲಿಂದಲೇ ಹರಿದು ಹೋದನು. ತೀವ್ರ ಗಾಯಗಳಿಂದ ನರಳುತ್ತಿದ್ದ ನಿಕಿತಾ ಸ್ಥಳದಲ್ಲೇ ಮೃತಪಟ್ಟಿದ್ದಾಳೆ.

ಈ-ರಿಕ್ಷಾ ಚಾಲಕ ನೀಡಿರುವ ಮಾಹಿತಿ ಪ್ರಕಾರ, ಡಿಕ್ಕಿ ಹೊಡೆದ ನಂತರ ವಾಹನವನ್ನು ತಕ್ಷಣ ನಿಲ್ಲಿಸಬಹುದಾಗಿತ್ತು. ಆದರೆ ಪೊಲೀಸ್ ಅಧಿಕಾರಿ ಅದನ್ನು ನಿರ್ಲಕ್ಷ್ಯ ಮಾಡಿ ವೇಗವಾಗಿ ಮುಂದಕ್ಕೆ ಹೋಗಿದ್ದರಿಂದ ಯುವತಿಗೆ ಜೀವ ಉಳಿಸಿಕೊಳ್ಳುವ ಅವಕಾಶವೇ ಸಿಗಲಿಲ್ಲ ಎಂದು ಹೇಳಿದ್ದಾರೆ.

ಘಟನೆ ಅಂಬಾಲಾ ಸೇತುವೆ ಸಮೀಪ ನಡೆದಿದ್ದು, ಡಿಕ್ಕಿ ಬಳಿಕ ಆರೋಪಿ ಸ್ಥಳದಿಂದ ತಪ್ಪಿಸಿಕೊಳ್ಳಲು ಯತ್ನಿಸಿದ್ದಾನೆ. ಆದರೆ ಘಟನೆ ಕಣ್ಣಾರೆ ಕಂಡ ಸ್ಥಳೀಯರು ತಕ್ಷಣ ಅವನನ್ನು ಬೆನ್ನಟ್ಟಿಸಿ ಹಿಡಿದು ಪೊಲೀಸರಿಗೆ ಒಪ್ಪಿಸಿದ್ದಾರೆ. ಗಾಯಗೊಂಡ ನಿಕಿತಾಳನ್ನು ಸ್ಥಳೀಯರು ತಕ್ಷಣವೇ ಸಿಟಿ ಆಸ್ಪತ್ರೆಗೆ ಸಾಗಿಸಿದರೂ, ವೈದ್ಯರು ಆಕೆಯನ್ನು ಮೃತಳಾಗಿ ಘೋಷಿಸಿದ್ದಾರೆ.

ಸುದ್ದಿ ತಿಳಿದ ಕೂಡಲೇ ನಿಕಿತಾಳ ಪೋಷಕರು ಆಸ್ಪತ್ರೆಗೆ ಧಾವಿಸಿ ಮಗಳ ಮೃತದೇಹ ನೋಡಿ ಕಣ್ಣೀರಿಟ್ಟಿದ್ದಾರೆ. ಕುಟುಂಬಸ್ಥರು ಹಾಗೂ ಬಂಧುಗಳು ಆಸ್ಪತ್ರೆ ಮುಂದೆ ಪ್ರತಿಭಟನೆ ನಡೆಸಿ, ಆರೋಪಿತ ಪೊಲೀಸ್ ಅಧಿಕಾರಿಗೆ ಕಠಿಣ ಶಿಕ್ಷೆ ವಿಧಿಸಬೇಕು ಎಂದು ಆಗ್ರಹಿಸಿದ್ದಾರೆ. ಪರಿಸ್ಥಿತಿ ಉದ್ವಿಗ್ನವಾಗಿದ್ದ ಹಿನ್ನೆಲೆಯಲ್ಲಿ ಹೆಚ್ಚುವರಿ ಪೊಲೀಸ್ ಬಂದೋಬಸ್ತ್ ನಿಯೋಜಿಸಲಾಗಿದೆ.

ಪ್ರಕರಣ ದಾಖಲಿಸಿ ಕೊಂಡಿರುವ ಪೊಲೀಸರು ತನಿಖೆ ಆರಂಭಿಸಿದ್ದಾರೆ. ಆರೋಪಿಯು ಮದ್ಯಪಾನ ಮಾಡಿದ್ದಾನೆಯೇ ಎಂಬುದನ್ನು ದೃಢಪಡಿಸಲು ವೈದ್ಯಕೀಯ ಪರೀಕ್ಷೆ ನಡೆಸಲಾಗುತ್ತಿದೆ. ಕರ್ತವ್ಯದಲ್ಲಿದ್ದ ವೇಳೆ ಮದ್ಯಪಾನ ಮಾಡಿ ವಾಹನ ಚಲಾಯಿಸಿದ್ದರೆ, ಕಠಿಣ ಕ್ರಮ ಕೈಗೊಳ್ಳುವುದಾಗಿ ಹಿರಿಯ ಅಧಿಕಾರಿಗಳು ತಿಳಿಸಿದ್ದಾರೆ.

ಈ ಘಟನೆ ಸಾರ್ವಜನಿಕ ಸುರಕ್ಷತೆ ಹಾಗೂ ಕಾನೂನು ಪಾಲನೆ ಬಗ್ಗೆ ಗಂಭೀರ ಪ್ರಶ್ನೆಗಳನ್ನು ಎಬ್ಬಿಸಿದೆ. ಕಾನೂನು ಜಾರಿ ಮಾಡುವ ಅಧಿಕಾರಿಯೇ ನಿಯಮ ಉಲ್ಲಂಘಿಸಿರುವುದು ಜನರಲ್ಲಿ ಆಕ್ರೋಶ ಮೂಡಿಸಿದ್ದು, ಮದ್ಯಪಾನ ಮಾಡಿ ವಾಹನ ಚಾಲನೆ ವಿರುದ್ಧ ಕಟ್ಟುನಿಟ್ಟಿನ ಕ್ರಮ ಅಗತ್ಯವಿದೆ ಎಂಬ ಅಭಿಪ್ರಾಯ ವ್ಯಕ್ತವಾಗಿದೆ. ನಿಷ್ಕಳಂಕ ಯುವತಿಯ ಅಕಾಲಿಕ ಸಾವಿನಿಂದ ಕುಟುಂಬ ಮಾತ್ರವಲ್ಲ, ಸ್ಥಳೀಯ ಸಮುದಾಯವೇ ಶೋಕದಲ್ಲಿ ಮುಳುಗಿದೆ.

# ಕಾರಿನೊಳಗೆ ಅಪ್ರಾಪ್ತ ಬಾಲಕಿ ಮೇಲೆ ಲೈಂಗಿಕ ದೌರ್ಜನ್ಯ

**ಭೋಪಾಲ್:** ಮಧ್ಯಪ್ರದೇಶದ ರಾಜಧಾನಿ ಭೋಪಾಲ್‌ನಲ್ಲಿ ಪಿಯುಸಿ ವಿದ್ಯಾರ್ಥಿನಿಯ ಮೇಲೆ ನಡೆದ ಲೈಂಗಿಕ ದೌರ್ಜನ್ಯದ ಆಘಾತಕಾರಿ ಪ್ರಕರಣ ಬೆಳಕಿಗೆ ಬಂದಿದೆ. ಪೊಲೀಸರು ಇಬ್ಬರು ಆರೋಪಿಗಳನ್ನು ಬಂಧಿಸಿದ್ದಾರೆ. ಥಾರ್ ಎಸ್‌ಯುವಿಯಲ್ಲೇ ಅಪ್ರಾಪ್ತ ಬಾಲಕಿ ಮೇಲೆ ಅತ್ಯಾಚಾರ ನಡೆಸಲಾಗಿತ್ತು. ಈ ಪ್ರಕರಣವು ಬ್ಲ್ಯಾಕ್‌ಮೇಲ್ ಮತ್ತು ಸುಲಿಗೆಯನ್ನೂ ಒಳಗೊಂಡಿದೆ ಎಂದು ಅಧಿಕಾರಿಗಳು ಹೇಳಿದ್ದಾರೆ.

ಪ್ರಮುಖ ಆರೋಪಿಯನ್ನು ಫೆಬ್ರವರಿ 3ರಂದು ವಶಕ್ಕೆ ಪಡೆಯಲಾಯಿತು. ಆತನನ್ನು ಜೈಲಿನಲ್ಲಿ ಇರಿಸಲಾಗಿದೆ. ನಗರದಲ್ಲಿ ಜಿಮ್ ನಡೆಸುತ್ತಿರುವ ಅವನ ಗೆಳೆಯ ಮೇಜ್ ಖಾನ್‌ನನ್ನು ಫೆಬ್ರವರಿ 8ರಂದು ಬಂಧಿಸಲಾಯಿತು. ಆರೋಪಗಳ ಗಂಭೀರತೆಯನ್ನು ಪರಿಗಣಿಸಿ, ಪೊಲೀಸ್ ಆಯುಕ್ತರು ವಿವರವಾದ ತನಿಖೆ ನಡೆಸಲು ವಿಶೇಷ ತನಿಖಾ ತಂಡವನ್ನು ರಚಿಸಿದ್ದಾರೆ. ಎಸಿಪಿ ಅಂಕಿತಾ ಖತ್ರಕರ್ ನೇತೃತ್ವದಲ್ಲಿ ತಂಡವನ್ನು ರಚಿಸಲಾಗಿದೆ.

4 ಪ್ರತ್ಯೇಕ ಕಾರುಗಳಲ್ಲಿ ವಿವಿಧ ಸ್ಥಳಗಳಲ್ಲಿ ಅಪ್ರಾಪ್ತ ಬಾಲಕಿಯ ಮೇಲೆ ಹಲ್ಲೆ ನಡೆಸಲಾಗಿದೆ ಎಂದು ತನಿಖಾಧಿಕಾರಿಗಳು ತಿಳಿಸಿದ್ದಾರೆ. ವಿಚಾರಣೆಯ ಸಮಯದಲ್ಲಿ ಪ್ರಮುಖ ಆರೋಪಿಗಳು ಆ ಬಾಲಕಿಯ ಮೇಲೆ ಹಲ್ಲೆ ನಡೆಸಿದ್ದಾರೆ. ಅಲ್ಲದೆ ತನ್ನ ಐಫೋನ್‌ನಲ್ಲಿ ಆತ ಇಡೀ ಘಟನೆಯನ್ನು ರೆಕಾರ್ಡ್ ಮಾಡಿದ್ದಾನೆ. ಅಪ್ರಾಪ್ತ ಬಾಲಕಿಗೆ ಬೆದರಿಕೆ ಹಾಕಲು ಈ ವೀಡಿಯೊವನ್ನು ಬಳಸಲಾಗಿದೆ ಎಂದು ಪೊಲೀಸರು ಹೇಳಿದ್ದಾರೆ. ಆ ವಿಡಿಯೋವನ್ನು ಆನ್‌ಲೈನ್‌ನಲ್ಲಿ ಹಾಕಬಾರದು ಎಂದಾದರೆ 40,000 ರೂ.ಗಳನ್ನು ನೀಡಲು ಡಿಮ್ಯಾಂಡ್ ಮಾಡಿದ್ದಾರೆ.

ಅತ್ಯಾಚಾರಕ್ಕೆ ಬಳಸಲಾದ ಥಾರ್ ಎಸ್‌ಯುವಿಯನ್ನು ಸೆಹೋರ್ ಜಿಲ್ಲೆಯ ಹಳ್ಳಿಯೊಂದರಲ್ಲಿ ಮುಚ್ಚಿಡಲಾಗಿತ್ತು. ಪೊಲೀಸರು ಅದನ್ನು ವಶಪಡಿಸಿಕೊಂಡಿದ್ದಾರೆ. ಆದರೆ, ವಿಡಿಯೋ ಇರುವ ಮೊಬೈಲ್ ಫೋನ್ ಇನ್ನೂ ಪತ್ತೆಯಾಗಿಲ್ಲ.

ತನಿಖೆಯ ಸಮಯದಲ್ಲಿ ಮೇಜ್ ಖಾನ್ ಮತ್ತು ಕೊಹೆಫಿಜಾ ಪೊಲೀಸ್ ಠಾಣೆಯಲ್ಲಿ ನಿಯೋಜಿಸಲಾದ ಹೆಡ್ ಕಾನ್‌ಸ್ಟೆಬಲ್ ನಡುವಿನ ಸಂಬಂಧವನ್ನು ಅಧಿಕಾರಿಗಳು ಬಹಿರಂಗಪಡಿಸಿದ್ದಾರೆ. ಈ ಪ್ರಕರಣಕ್ಕೆ ಸಂಬಂಧಿಸಿದ ಸೂಕ್ಷ್ಮ ಮಾಹಿತಿಯನ್ನು ಸೋರಿಕೆ ಮಾಡಿದ ಆರೋಪ ಅಧಿಕಾರಿಯ ಮೇಲಿದೆ. ಹೀಗಾಗಿ ಹೆಡ್ ಕಾನ್‌ಸ್ಟೆಬಲ್ ಅನ್ನು ಅಮಾನತುಗೊಳಿಸಲಾಗಿದೆ. ಈ ಪ್ರಕರಣದಲ್ಲಿ ಭಾಗಿಯಾಗಿರುವ ಎಲ್ಲರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಪೊಲೀಸ್ ಅಧಿಕಾರಿಗಳು ಭರವಸೆ ನೀಡಿದ್ದಾರೆ.

ಸುದ್ದಿ ಹಾಗೂ ಜಾಹೀರಾತುಗಾಳಿಗಾಗಿ ಸಂಪರ್ಕಿಸಿ:
9538786812 8217606793

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.